ಸಂಪುಟ 01 | ಸಂಚಿಕೆ 176 ಭಾನುವಾರ 30 ಆಗಸ್ಟ್ 2026 | ಪುಟ 4 | ಬೆಲೆ–2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1)ಬಲವಂತದ ಕಣ್ಮರೆಯಾದವರ ಅಂತರರಾಷ್ಟ್ರೀಯ ದಿನ (International Day of the Victims of Enforced Disappearances) ಬಲವಂತವಾಗಿ ಕಣ್ಮರೆಯಾಗಿರುವ ವ್ಯಕ್ತಿಗಳ ಬಗ್ಗೆ ಜಾಗೃತಿ ಮೂಡಿಸುವುದು, ಅವರ ಕುಟುಂಬಗಳ ಹಕ್ಕುಗಳು ಮತ್ತು ಸತ್ಯ, ನ್ಯಾಯಕ್ಕಾಗಿ ಧ್ವನಿ ಎತ್ತುವುದು ಈ ದಿನದ ಉದ್ದೇಶ. ವಿಶ್ವಸಂಸ್ಥೆಯು ಆಗಸ್ಟ್ 30ನ್ನು ಈ ದಿನವಾಗಿ ಆಚರಿಸುತ್ತದೆ.

2) ರಾಷ್ಟ್ರೀಯ ಸಣ್ಣ ಕೈಗಾರಿಕಾ ದಿನ (National Small Industry Day) ಭಾರತದ ಸಣ್ಣ ಕೈಗಾರಿಕೆಗಳು ಮತ್ತು ಒಖಒಇ ಕ್ಷೇತ್ರದ ಆರ್ಥಿಕ ಬೆಳವಣಿಗೆ, ಉದ್ಯೋಗ ಸೃಷ್ಟಿ ಹಾಗೂ ಉದ್ಯಮಶೀಲತೆಗೆ ನೀಡುವ ಕೊಡುಗೆಯನ್ನು ಗೌರವಿಸುವ ದಿನ. ಭಾರತದಲ್ಲಿ ಆಗಸ್ಟ್ 30ರಂದು ಆಚರಿಸಲಾಗುತ್ತದೆ.

3)ಅಂತರರಾಷ್ಟ್ರೀಯ ತಿಮಿಂಗಿಲ ಶಾರ್ಕ್ ದಿನ (International Whale Shark Day) ವಿಶ್ವದ ಅತಿ–ದೊಡ್ಡ ಮೀನುಗಳಲ್ಲಿ ಒಂದಾದ ತಿಮಿಂಗಿಲ ಶಾರ್ಕ್‌ಗಳ ಸಂರಕ್ಷಣೆ ಮತ್ತು ಸಮುದ್ರ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ದಿನ.

## ಸುಭಾಷಿತ

ಸರಿಯಾದ ರೀತಿಯಲ್ಲಿ
ಉಪಯೋಗಿಸದಿದ್ದರೆ ಒಳ್ಳೆಯ ಗುಣವೇ
ಕೆಲವು ಬಾರಿ ಕೆಟ್ಟದ್ದಕ್ಕೆ ಕಾರಣವಾಗುತ್ತದೆ.
–ವಿಲಿಯಂ ಷೇಕ್ಸ್‌ಪಿಯರ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ. ಜಿಲಾನಿ ಪಾಷಾ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು ಸಿಂಧನೂರು ವತಿಯಿಂದ ಪ್ರತೀ ಶನಿವಾರ ಹಮ್ಮಿಕೊಳ್ಳಲಾಗುತ್ತಿರುವ ಶನಿವಾರದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಂಗವಾಗಿ ಆಗಸ್ಟ್ 29 ರಂದು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಆಯುರ್ವೇದ ಪಂಚಕರ್ಮ ಹಾಗೂ ನರ್ಸಿಂಗ್ ಕ್ಷೇತ್ರದ ಮಹತ್ವ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.**

ಕಾರ್ಯಕ್ರಮಕ್ಕೆ ಸಿಂಧನೂರಿನ ಸಹರಾ ಕ್ಲಿನಿಕ್ & ಫಾಲಿಬ್ ಮೆಡಿಕಲ್ಸ್‌ನ ಖ್ಯಾತ ಆಯುರ್ವೇದ ತಜ್ಞರಾದ ಡಾ. ಜಿಲಾನಿ ಪಾಷಾ (ಃ೦ಒಖ, ಒಆ) ಅವರು ಮುಖ್ಯ ಅತಿಥಿ ಹಾಗೂ ಉಪನ್ಯಾಸಕರಾಗಿ ಆಗಮಿಸಿ, ವಿದ್ಯಾರ್ಥಿಗಳಿಗೆ 'ಆಯುರ್ವೇದ ಪಂಚಕರ್ಮ' ವಿಷಯದ ಕುರಿತು ಸವಿಸ್ತಾರವಾದ ಹಾಗೂ ಉಪಯುಕ್ತ ಮಾಹಿತಿಯನ್ನು ನೀಡಿದರು. ಉಪನ್ಯಾಸದಲ್ಲಿ ಮಾತನಾಡಿದ ಡಾ. ಜಿಲಾನಿ ಪಾಷಾ ಅವರು, ಆಯುರ್ವೇದವು ಭಾರತದ ಪ್ರಾಚೀನ ಹಾಗೂ ವೈಜ್ಞಾನಿಕ ಚಿಕಿತ್ಸಾ ಪದ್ಧತಿಗಳಲ್ಲಿ ಪ್ರಮುಖವಾದದ್ದು. ಮಾನವನ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಮಹತ್ವ ನೀಡುವ ಆಯುರ್ವೇದದಲ್ಲಿ ರೋಗವನ್ನು ಕೇವಲ ನಿವಾರಿಸುವುದಕ್ಕಿಂತ ದೇಹದ ಸಮತೋಲನವನ್ನು ಕಾಪಾಡುವುದು ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಪಂಚಕರ್ಮ ಚಿಕಿತ್ಸಾ ಪದ್ಧತಿಯ ಉದ್ದೇಶ, ಅದರ ವಿವಿಧ ವಿಧಾನಗಳು ಹಾಗೂ ಚಿಕಿತ್ಸೆಯಲ್ಲಿ ಅದರ ಮಹತ್ವ ಕುರಿತು ವಿದ್ಯಾರ್ಥಿಗಳಿಗೆ ಸರಳವಾಗಿ ವಿವರಿಸಿದರು. ದೇಹದಲ್ಲಿನ ಅಸಮತೋಲನವನ್ನು ಸರಿಪಡಿಸುವಲ್ಲಿ, ದೇಹ–ಮನಸ್ಸಿನ ಆರೋಗ್ಯವನ್ನು ಕಾಪಾಡುವಲ್ಲಿ ಪಂಚಕರ್ಮ ಚಿಕಿತ್ಸೆಯ ಪಾತ್ರದ ಕುರಿತು ಮಾಹಿತಿ ನೀಡಿದರು. ಪಂಚಕರ್ಮ ಚಿಕಿತ್ಸೆಯನ್ನು ಅರ್ಹ ತಜ್ಞ ವೈದ್ಯರ ಸಲಹೆ ಮತ್ತು ಮೇಲ್ವಿಚಾರಣೆಯಲ್ಲಿ ಮಾತ್ರ ಕೈಗೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಆಯುರ್ವೇದ ಚಿಕಿತ್ಸಾ ಪದ್ಧತಿಯಲ್ಲಿ ರೋಗಿಯ ಆಹಾರ ಪದ್ಧತಿ, ಜೀವನಶೈಲಿ, ದೈಹಿಕ ಸ್ಥಿತಿ ಹಾಗೂ ಮಾನಸಿಕ ಆರೋಗ್ಯಕ್ಕೂ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುತ್ತದೆ. ಇಂದಿನ ಒತ್ತಡದ ಜೀವನಶೈಲಿ, ಆಹಾರ ಪದ್ಧತಿಯಲ್ಲಿನ ಬದಲಾವಣೆ ಹಾಗೂ ದೈನಂದಿನ ಚಟುವಟಿಕೆಗಳ ಪರಿಣಾಮವಾಗಿ ವಿವಿಧ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಇಂತಹ ಸಂದರ್ಭದಲ್ಲಿ ಆರೋಗ್ಯಕರ ಜೀವನಶೈಲಿ,





ಸಮತೋಲನ ಆಹಾರ, ನಿಯಮಿತ ವ್ಯಾಯಾಮ ಹಾಗೂ ಉತ್ತಮ ನಿದ್ರೆಯ ಮಹತ್ವವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಸಲಹೆ ನೀಡಿದರು.

ನರ್ಸಿಂಗ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ನರ್ಸಿಂಗ್ ವೃತ್ತಿ ಕೇವಲ ಉದ್ಯೋಗವಲ್ಲ, ಅದು ಸೇವೆಯ ಮಹತ್ತರ ಕ್ಷೇತ್ರವಾಗಿದೆ. ರೋಗಿಯೊಂದಿಗೆ ನೇರವಾಗಿ ಸಂಪರ್ಕದಲ್ಲಿರುವ ನರ್ಸ್‌ಗಳು ರೋಗಿಯ ದೈಹಿಕ ಸ್ಥಿತಿಯ ಜೊತೆಗೆ ಅವರ ಮಾನಸಿಕ ಸ್ಥಿತಿಯನ್ನೂ ಅರ್ಥಮಾಡಿಕೊಂಡು ಆತ್ಮೀಯವಾಗಿ ಆರೈಕೆ ಮಾಡಬೇಕು. ವೈದ್ಯರು ನೀಡುವ ಚಿಕಿತ್ಸೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಲ್ಲಿ ಹಾಗೂ ರೋಗಿಯ ಆರೋಗ್ಯ ಸುಧಾರಣೆಯಲ್ಲಿ ನರ್ಸಿಂಗ್ ಸಿಬ್ಬಂದಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲಿಯೇ ಜ್ಞಾನ, ಕೌಶಲ್ಯ, ಶಿಸ್ತು, ಸಮಯಪಾಲನೆ, ಸಂವಹನ ಕೌಶಲ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ವೈದ್ಯಕೀಯ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನಿರಂತರವಾಗಿ ಹೊಸ ಜ್ಞಾನವನ್ನು ಕಲಿಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಡಾ. ಜಿಲಾನಿ ಪಾಷಾ ಅವರು, ಆರೋಗ್ಯ ಕ್ಷೇತ್ರದಲ್ಲಿ ಎದುರಾಗುವ ವಿವಿಧ ಸಂದರ್ಭಗಳಲ್ಲಿ ನರ್ಸಿಂಗ್ ವಿದ್ಯಾರ್ಥಿಗಳು ಹೇಗೆ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂಬುದರ ಕುರಿತು ಮಾರ್ಗದರ್ಶನ ನೀಡಿದರು. ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ಅವರಲ್ಲಿದ್ದ ಹಲವು ಅನುಮಾನಗಳನ್ನು ನಿವಾರಿಸಿದರು. ಅವರ ಸರಳ ಹಾಗೂ ಪ್ರಾಯೋಗಿಕ ಉಪನ್ಯಾಸ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಆಸಕ್ತಿ ಮೂಡಿಸಿತು. ಉಪನ್ಯಾಸದ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸೇವಾ ಮನೋಭಾವ ಹಾಗೂ ವೃತ್ತಿಪರ ಜವಾಬ್ದಾರಿಯ ಅರಿವು ಹೆಚ್ಚಿಸುವಲ್ಲಿ ಕಾರ್ಯಕ್ರಮ ಯಶಸ್ವಿಯಾಯಿತು. ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ವೃತ್ತಿಪರರಾಗಿ ಹೊರಹೊಮ್ಮಲು ಇಂತಹ ವಿಶೇಷ ಉಪನ್ಯಾಸಗಳು ವಿದ್ಯಾರ್ಥಿಗಳಿಗೆ ಬಹಳಷ್ಟು ಸಹಕಾರಿಯಾಗಲಿವೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯ ಜೊತೆಗೆ ಪ್ರಾಯೋಗಿಕ ಜ್ಞಾನವನ್ನು ಹೆಚ್ಚಿಸುವ ಉದ್ದೇಶದಿಂದ ಪ್ರತೀ ಶನಿವಾರ ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ವಿವಿಧ ಕ್ಷೇತ್ರಗಳ ತಜ್ಞರನ್ನು ಸಂಸ್ಥೆಗೆ ಆಹ್ವಾನಿಸಿ ಅವರ ಅನುಭವ ಹಾಗೂ ಜ್ಞಾನವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ಹೇಳಿದರು. ಇಂದಿನ ವಿಶೇಷ ಉಪನ್ಯಾಸದ ಮೂಲಕ ಆಯುರ್ವೇದ ಪಂಚಕರ್ಮ ಹಾಗೂ ನರ್ಸಿಂಗ್ ಕ್ಷೇತ್ರದ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಅಮೂಲ್ಯವಾದ ಮಾಹಿತಿಯನ್ನು ನೀಡಿದ ಡಾ. ಜಿಲಾನಿ ಪಾಷಾ (ಃ೦ಒಖ, ಒಆ) ಅವರಿಗೆ ಸನ್ ರೈಸ್ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ, ಕಾರ್ಯದರ್ಶಿಗಳಾದ ಇರ್ಷಾದ್ ಕೆ, ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸಿದರು.

ವಿದ್ಯಾರ್ಥಿಗಳು ಇಂತಹ ತಜ್ಞರ ಉಪನ್ಯಾಸಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಜ್ಞಾನವನ್ನು ವಿಸ್ತರಿಸಿಕೊಳ್ಳಬೇಕು. ಭವಿಷ್ಯದಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುವ ಮೂಲಕ ಸಮಾಜಕ್ಕೆ ಕೊಡುಗೆ ನೀಡುವಂತಹ ಜವಾಬ್ದಾರಿಯುತ ಆರೋಗ್ಯ ವೃತ್ತಿಪರರಾಗಬೇಕು ಎಂದು ಲಾಜರ್ ಸಿರಿಲ್ ಅವರು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಸನ್ ರೈಸ್ ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ವಿಭಾಗಗಳ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದರು.

ಸನ್ ರೈಸ್ ವಿದ್ಯಾ ಸಂಸ್ಥೆಯ ಶನಿವಾರದ ವಿಶೇಷ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ನಿರಂತರ ಜ್ಞಾನಾರ್ಜನೆ, ತಜ್ಞರ ಮಾರ್ಗದರ್ಶನ ಹಾಗೂ ವೃತ್ತಿಪರ ಆತ್ಮವಿಶ್ವಾಸವನ್ನು ಬೆಳೆಸುವ ಮಹತ್ವದ ವೇದಿಕೆಯಾಗಿ ಮುಂದುವರಿಯುತ್ತಿದೆ.





## ವಿದ್ಯಾರ್ಥಿಗಳಿಗೆ ದಂತ ಆರೋಗ್ಯ ತಪಾಸಣಾ ಶಿಬಿರ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಸಮೀಪದ ಜವಳಗೇರಾದ ಫಾದರ್ ಜೋಕಿಮ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ದಂತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.**

ಶಿಬಿರದಲ್ಲಿ ದಂತ ವೈದ್ಯಾಧಿಕಾರಿಗಳಾದ ಡಾ. ಅಫ್ರೋಜ್ ಭಾನು ಅವರು ವಿದ್ಯಾರ್ಥಿಗಳ ದಂತ ತಪಾಸಣೆ ನಡೆಸಿ, ದಂತ ಆರೋಗ್ಯದ ಮಹತ್ವ ಹಾಗೂ ದಂತ ಅನಾರೋಗ್ಯದ ಲಕ್ಷಣಗಳ ಕುರಿತು ಮಾಹಿತಿ ನೀಡಿದರು. ಹಲ್ಲುಗಳು ಹಾಳಾಗದಂತೆ ಕಾಪಾಡಿಕೊಳ್ಳಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿವರಿಸಿ, ದಂತ ಆರೋಗ್ಯ ಸಮಸ್ಯೆಗಳು ಕಂಡುಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದರು.

ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು, ಹಲ್ಲು ಮತ್ತು ಬಾಯಿಯ ಸ್ವಚ್ಛತೆಯನ್ನು ನಿರ್ಲಕ್ಷಿಸಿದರೆ ಕ್ಯಾನ್ಸರ್ ಸೇರಿದಂತೆ ಗಂಭೀರ ಕಾಯಿಲೆಗಳು ಉಂಟಾಗುವ ಸಾಧ್ಯತೆ



ಇದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಪ್ರತಿದಿನ ಬೆಳಿಗ್ಗೆ ಮತ್ತು ರಾತ್ರಿ ಸರಿಯಾದ ವಿಧಾನದಲ್ಲಿ ಹಲ್ಲು ತೊಳೆಯುವ ಅಭ್ಯಾಸ ರೂಢಿಸಿಕೊಳ್ಳಬೇಕು. ಉತ್ತಮ ದಂತ ಆರೋಗ್ಯವು ಸಮಗ್ರ ಆರೋಗ್ಯದ ಪ್ರಮುಖ ಭಾಗವಾಗಿದ್ದು, ಸ್ವಚ್ಛತೆಯ ಮೂಲಕ ಅನೇಕ ಕಾಯಿಲೆಗಳನ್ನು ತಡೆಗಟ್ಟಬಹುದು ಎಂದು ಹೇಳಿದರು.

ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ದಂತ ಆರೋಗ್ಯದ ಬಗ್ಗೆ ಅರಿವು ಮೂಡಿಸಿ, ಸರಿಯಾದ ದಂತ ಆರೈಕೆ ಕ್ರಮಗಳ ಕುರಿತು ಆರೋಗ್ಯ ಶಿಕ್ಷಣ ನೀಡಲಾಯಿತು. ಈ ಸಂದರ್ಭದಲ್ಲಿ ಫಾದರ್ ಜೋಕಿಮ್ ಆಂಗ್ಲ ಮಾಧ್ಯಮ ಶಾಲೆಯ ಫಾದರ್, ಶಿಕ್ಷಕರು, ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಕ್ರಮ ನೀರು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ: ಡಿವೈಎಸ್ಪಿ ಚಂದ್ರಶೇಖರ ನಾಯಕ

❏ ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಸಮೀಪದ 65 ರ ಉಪಕಾಲುವೆ ಹಾಯ್ದುಹೊಗುವ ಯದ್ದಲದಿನ್ನಿ, ಕ್ಯಾಂಪ,ಎನ್ ಎನ್ ಕ್ಯಾಂಪ,ಉಟಕನೂರು ಸೇರಿದಂತೆ ರೈತರು ತಮ್ಮ ಭಾಗಕ್ಕೆ ಇನ್ನೂ ನೀರು ಬರುತ್ತಿಲ್ಲ ಮೆಲ್ಭಾಗದ ರೈತರು ಅಕ್ರಮ ಪೈಪಲೈನ್ ಇನ್ನಿತರೆ ಮೂಲಕ ನೀರು ಪಡೆಯುವ ಕಾರಣ ಕೆಳಬಾಗದ ರೈತರ ಹೊಲಗದ್ದೆಗಳಿಗೆ ಇನ್ನೂ ನೀರು ತಲುಪಿಲ್ಲ ಎಂಬ ಆರೋಪದಿಂದ ಸ್ವತಃ ಸ್ಥಳಕ್ಕೆ ಸಿಂದನೂರು ಡಿವೈಎಸ್ಪಿ ಚಂದ್ರಶೇಖರ ನಾಯಕ ನೇತ್ರತ್ವದಲ್ಲಿ ಸಿರಿವಾರ ಸಿಪಿಆಯ್ ಎಮ್ ಶಶಿಕಾಂತ,**

ನೀರಾವರಿ ಇಲಾಖೆ ಅಧಿಕಾರಿಗಳಾದ ಕೊದಂಡರಾಮ, ವಿದ್ಯಸಾಗರ, ಅನ್ನಪೂರ್ಣ, ಹನುಮಂತಪ್ಪ ನಾಯಕ ಅಧಿಕಾರಿಗಳು ಸೇರಿದಂತೆ, ಅನೇಕ ರೈತರು ಕಾಲುವೆಗೆ ಅಕ್ರಮ ಪೈಪಲೈನ್, ಬೊಂಗಾ ಇದ್ದದ್ದನ್ನು ಅಧಿಕಾರಿಗಳಿಗೆ ತೊರಿಸಿ,ಇದರಿಂದ ನಮ್ಮ ಭಾಗಕ್ಕೆ ನೀರು ಇನ್ನೂ ಬರುತ್ತಿಲ್ಲ, ನಮ್ಮ ಗೊಳು ಕೇಳುವವರು ಯಾರು, ಇಲ್ಲಿ ಮುಖ್ಯವಾಗಿ ಸ್ಥಳೀಯ ನೀರಾವರಿ ಅಧಿಕಾರಿಗಳ ನಿಷ್ಕಲಾಜಿ ಲೊಪದೊಷ



ಎದ್ದು ಕಾಣುತ್ತದೆ,ಅವರಿಂದಾಗಿ ಅಕ್ರಮವಾಗಿ ನೀರು ಪೊಲಾಗುತ್ತದೆ ಇದಕ್ಕೆ ನೇರ ಹೊಣೆಗಾರಿಕೆ ಅವರೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.ಅದಕ್ಕೆ ಈಗಲಾದರೂ ನೀರನ್ನು ನಮ್ಮ ಕೊನೆಯ ಭಾಗಕ್ಕೆ ಬರಲು ಸರಿಯಾಗಿ ನೋಡಿಕೊಂಡು ರೈತರಿಗೆ ಆಸರೆಯಾಗಬೇಕೆಂದು ಹತ್ತಾರು ರೈತರು ಒತ್ತಾಯ ಮಾಡಿದರು.

## ರಾಯಚೂರು ಜಿಲ್ಲೆಗೆ ಆ.30, 31ರಂದು ರಾಜ್ಯ ಎಸ್‌ಸಿ–ಎಸ್‌ಟಿ ಆಯೋಗದ ಅಧ್ಯಕ್ಷರ ಪ್ರವಾಸ
### ಆ.31ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಭೆ–ಅಹವಾಲು ಸ್ವೀಕಾರ; ಮಧ್ಯಾಹ್ನ ಪತ್ರಿಕಾಗೋಷ್ಠಿ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರು (ಸಂಪುಟ ದರ್ಜೆ) ಡಾ. ಮೂರ್ತಿ ಎಲ್. ಹಾಗೂ ಆಯೋಗದ ಸದಸ್ಯರು ಆ.30 ಮತ್ತು 31ರಂದು ರಾಯಚೂರು ಜಿಲ್ಲೆಗೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.**

ಪ್ರವಾಸದ ಅಂಗವಾಗಿ ಆ.31ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪೊಲೀಸ್ ಅಧೀಕ್ಷಕರು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಂಘ?ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು. ಸಭೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳು, ಸರ್ಕಾರಿ ಯೋಜನೆಗಳ ಅನುಷ್ಠಾನ, ಕುಂದುಕೊರತೆಗಳು ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ಸಂಘ?ಸಂಸ್ಥೆಗಳ ಪದಾಧಿಕಾರಿಗಳಿಂದ ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಅದೇ ದಿನ ಮಧ್ಯಾಹ್ನ 1.30ಕ್ಕೆ ಪತ್ರಿಕಾಗೋಷ್ಠಿ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಕಾರ್ಯದರ್ಶಿಗಳ ಕಚೇರಿ ತಿಳಿಸಿದೆ. ಆದ್ದರಿಂದ ಆ.31ರಂದು ಬೆಳಿಗ್ಗೆ 10.30ಕ್ಕೆ ನಡೆಯುವ ಸಭೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಂಘ?ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಂಬಂಧಪಟ್ಟವರು ತಪ್ಪದೇ ಹಾಜರಾಗಿ ತಮ್ಮ ಸಮಸ್ಯೆ ಹಾಗೂ ಅಹವಾಲುಗಳನ್ನು ಆಯೋಗದ ಗಮನಕ್ಕೆ ತರಬೇಕು ಎಂದು ಕೋರಲಾಗಿದೆ. ಎಂದು ಸಹಾಯಕ ನಿರ್ದೇಶಕರು ಗ್ರೇಡ್ ಒನ್ ಸಮಾಜ ಕಲ್ಯಾಣ ಇಲಾಖೆ ಮಾನ್ವಿರವರು ಪತ್ರಿಕ ಹೇಳಿಕೆ ನೀಡಿರುತ್ತಾರೆ

## ಹಾವು ಕಡಿದಾಗ ದೈರ್ಯಗುಂದಬೇಡಿ, ಹತ್ತಿರದ ಆಸ್ಪತ್ರೆಗೆ ತಕ್ಷಣ ಚಿಕಿತ್ಸೆಗೆ ಕರೆದುಕೊಂಡು ಹೋಗಿ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು ತಾಲೂಕಿನ ಹೊಸಳ್ಳಿ ಕ್ಯಾಂಪು ಅಂಗನವಾಡಿ ಕೇಂದ್ರದಲ್ಲಿ ಹೊರ ವಲಯದ ಮಕ್ಕಳ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಲ್ಲಿ ತಾಯಂದಿರಿಗೆ ಮತ್ತು ಗರ್ಭಿಣಿಯರಿಗೆ ಸಾರ್ವಜನಿಕರಿಗೆ ಶ್ರೀಮತಿ ಗೀತಾ ಹಿರೇಮಠ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ ಇವರು ತಾಯಂದಿರನ್ನು ಉದ್ದೇಶಿಸಿ ಮಾತನಾಡಿದರು.**

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ತಾಲೂಕ ಆರೋಗ್ಯಾಧಿಕಾರಿಗಳ ಕಾರ್ಯಲಯ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ದಢೆಸುಗೂರ ಇವರ ಸಂಯುಕ್ತ ಆಶ್ರಯದಲ್ಲಿ ಇ ಜೆ ಹೊಸಳ್ಳಿಯ ಆಯುಷ್ ಆರೋಗ್ಯ ಕೇಂದ್ರಕ್ಕೆ ಒಳಪಡುವ ಹೊಸಳ್ಳಿ ಕ್ಯಾಂಪನಲ್ಲಿ ಜಾಗೃತಿ ನೀಡುತ್ತಾ, ಹಾವು ಕಚ್ಚಿದಾಗ ಹೆದರಬೇಡಿ ಮತ್ತು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಸಮಾಧಾನ ಪಡಿಸಬೇಕು ಹಾವಿನಿಂದ ನಿಧಾನವಾಗಿ ದೂರ ಸರಿಯಬೇಕು, ದೇಹದ ಮೇಲೆ ಬಿಗಿಯಾದ ವಸ್ತುಗಳು ವಾಚ್, ಬೆಲ್ಟ್, ಪಾದರಕ್ಷೆಗಳು, ಕಾಲುಂಗುರಗಳು ಮುಂತಾದ ವಸ್ತುಗಳೆಲ್ಲವೂ ದೇಹದಿಂದ ತೆಗೆಯಬೇಕು, ತಕ್ಷಣವೇ ಆಸ್ಪತ್ರೆಗೆ ತೆರಳಿ ಜೀವ ಉಳಿಸಿಕೊಳ್ಳಬೇಕು, ಹಾವು ಕಚ್ಚಿದಾಗ ಗಾಬರಿಯಾಗಬಾರದು.

ಹಾವು ಕಚ್ಚಿದಾಗ ಬಿಗಿಯಾದ ಬಟ್ಟೆಗಳನ್ನು ಕಟ್ಟಬಾರದು ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಬೇಕು ಮೂಢನಂಬಿಕೆಗಳಿಂದ ದೂರವಿದ್ದು ನಾಟಿ ಔಷಧಗಳನ್ನು ಹಾಗೂ ಬೇರುಗಳನ್ನು ಹಾಕಿಸುವುದನ್ನು ಬಿಡಬೇಕು ಇನ್ನಾವುದೇ ಆ ಸುರಕ್ಷಿತ ಚಿಕಿತ್ಸಾ ವಿಧಾನವನ್ನು ಅವಲಂಬಿಸಬಾರದು ಹಾವನ್ನು ಹಿಡಿಯುವ ಮತ್ತು ಕೊಲ್ಲುವ



ಮಾಡಬಾರದು ಅಮೂಲ್ಯವಾದ ಸಮಯವನ್ನು ಹಾಳು ಮಾಡಬಾರದು ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಉಚಿತ ಚಿಕಿತ್ಸೆ ಲಭ್ಯವಿರುತ್ತದೆ ತುರ್ತು ಪರಿಸ್ಥಿತಿಗಳಿಗಾಗಿ ನಿಮ್ಮ ಸ್ಥಳೀಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಥವಾ ಆಂಬುಲೆನ್ಸ್ ಗೆ ತಕ್ಷಣವೇ ಕರೆ ಮಾಡಿ ಆಸ್ಪತ್ರೆಗೆ

ಈ ಸಂದರ್ಭದಲ್ಲಿ ನಿಂಗಮ್ಮ ಪಿಎಚ್ ಸಿಇಓ, ಜ್ಞಾನೇಶ್ವರಿ ಸಿ ಎಚ್ ಓ, ಮಲ್ಲಿಕಾರ್ಜುನ್ ಎಚ್ಐಓ, ಖತಮ್ಮ ಆಶಾ ಕಾರ್ಯಕರ್ತೆ ಹಾಗೂ ಗರ್ಭಿಣಿ ತಾಯಂದಿರು ಸಾರ್ವಜನಿಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ನದಿಯಂತೆ ಸಾಗುವ ಜೀವನ

ನದಿಯಂತೆ ಸಾಗಲಿ ಜೀವನ,
ತಿರುವುಗಳಿದ್ದರೂ ನಿಲ್ಲದಿರಲಿ ಪಯಣ.ಕಲ್ಲು
ಬಂಡೆಗಳು ಎದುರಾದರೂ,
ಧೈರ್ಯದಿಂದ ದಾಟಲಿ ಪ್ರತಿಕ್ಷಣ.

ಒಮ್ಮೆ ಶಾಂತವಾಗಿ ಹರಿಯುವುದು,
ಮತ್ತೊಮ್ಮೆ ಅಲೆಗಳಾಗಿ ಏಳುವುದು.ಸುಖ?ದುಃಖಗಳ
ದಾರಿಯಲಿ,
ಹೊಸ ಪಾಠಗಳನ್ನು ಕಲಿಯುವುದು.

ಹಿಂದೆ ಬಿಟ್ಟ ನೆನಪುಗಳ ತೀರ,
ಮುಂದೆ ಕಾಣುವ ಕನಸುಗಳ ದಾರಿ.ನಿನ್ನೆ ಎಂಬುದು
ಹರಿದ ನೀರು,
ನಾಳೆ ಎಂಬುದು ಹೊಸ ಹೊನಲು ಸಾರಿ.

ನದಿಯು ಸಾಗರ ಸೇರುವಂತೆ,
ಜೀವನ ಗುರಿಯತ್ತ ಸಾಗಲಿ.
ಎಷ್ಟೇ ಕಷ್ಟ ಬಂದರೂ ಮನಸು,
ಭರವಸೆಯ ಬೆಳಕಾಗಿ ಹೊಳೆಯಲಿ.

ಹರಿಯುವುದೇ ನದಿಯ ಧರ್ಮ,
ಮುಂದೆ ಸಾಗುವುದೇ ಜೀವನದ ಮರ್ಮ.
ನಿಂತರೆ ನೀರು ಕೊಳೆಯುವುದು,
ಸಾಗಿದರೆ ಬದುಕು ಅರಳುವುದು.

## ಶ್ರೀ ರಾಘವೇಂದ್ರ ಸ್ವಾಮಿಗಳ ವೇಷಭೂಷಣ ಧರಿಸಿ, ಗಮನಸೆಳೆದ ಚಿಕ್ಕ ಮಕ್ಕಳು

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕಲಿಯುಗದಲ್ಲಿ ಜನಸಾಮಾನ್ಯರಿಗೆ ಸರ್ವಜನಾಂಗದವರಿಗೂ ಧರ್ಮ ಕಾರ್ಯಗಳು ಮಾಡಲು ಪ್ರೇರಣೆಗಾಗಿ ರಾಯರ ಅನುಗ್ರಹ ನೀಡುತ್ತಾರೆ. ಶ್ರೀ ರಾಘವೇಂದ್ರ ಸ್ವಾಮಿಗಳು ಸರ್ವಜನಾಂಗದವರಿಗೂ ಗುರುಗಳಾಗಿ ಕಾಮಧೇನು ಕಲ್ಪವೃಕ್ಷರಾಗಿದ್ದಾರೆ ಎಂದು ವಶಿಷ್ಠಧಾಮ ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಭೀಮಸೇನಾಚಾರ್ಯ ನವಲಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಸಿಂಧನೂರು ನಗರದ ಶ್ರೀ ರಾಘವೇಂದ್ರಸ್ವಾಮಿಗಳವರ ಮಠದಲ್ಲಿ ವಶಿಷ್ಠಧಾಮ ಸೇವಾ ಟ್ರಸ್ಟ್‌ನ ವತಿಯಿಂದ ಪ್ರತಿತಿಂಗಳ ಕಾರ್ಯಕ್ರಮದಂತೆ ರಾಯರ ಆರಾಧನಾ ಪೂರ್ವ ಕಾರ್ಯಕ್ರಮದ ಮಕ್ಕಳಿಗೆ ರಾಯರ ವೇಷ ಭೂಷಣ ಸ್ಪರ್ಧೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ ಸರ್ವಜನಾಂಗದವರಿಗೂ ರಾಯರು ದೇವರ ಸ್ವರೂಪದಲ್ಲಿ ಗುರುಗಳಾಗಿದ್ದಾರೆ. ಅನೇಕ ಧಾರ್ಮಿಕ ಕಾರ್ಯಕ್ರಮಗಳಿಗೆ ಭಕ್ತರಿಗೆ ಪ್ರೇರಣೆಯಾಗಿದ್ದಾರೆ ಎಂದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಪಂಡಿತರಾದ ವೇದ ಮೂರ್ತಿ ರಾಮಕೃಷ್ಣಾಚಾರ್ಯ ಗೋನವಾರ ಮಾತನಾಡಿ ಶ್ರೀ ರಾಘವೇಂದ್ರ ಸ್ವಾಮಿಗಳ ಗುರುಪದಹಾರ ಪದ್ಯವು ಮಹಿಳೆಯರಿಗೆ ಸರ್ವಜನಾಂಗದವರಿಗೆ ನಿತ್ಯ ಪಾರಾಯಣಕ್ಕೆ ಅನುಕೂಲವಾಗಿದೆ ಎಂದರು.

ಇದೇ ಸಮಯದಲ್ಲಿ ರಾಯರ ವೇಷ ಭೂಷಣ ಸ್ಪರ್ಧೆಯಲ್ಲಿ ಭಾಗವಹಿಸಿದ ಚಿಕ್ಕ ಮಕ್ಕಳಾದ ರಾಘವ ಬಂದಿಷ್ಠ, ಧನ್ಯಶ್ರೀ ಕುಲಕರ್ಣಿ, ಸಾತ್ವಿಕ್ ಕುಲಕರ್ಣಿ, ಸಮರ್ಥ ಕುಲಕರ್ಣಿ, ಲೋಹಿತ, ಪಾರ್ಥಸಾರಥಿ ಕಲ್ಲೂರು, ಶ್ರೀರಾಮ ದೇಸಾಯಿ, ಸಂಸ್ಕೃತ ದೇಸಾಯಿ, ವಾಗ್ದೇವಿ, ಸಾನ್ವಿ ಜೋಷಿ ಹಾಗೂ ಕೌಸ್ತುಭ ಕುಲಕರ್ಣಿ ಅವರಿಗೆ ವಶಿಷ್ಠಧಾಮದಿಂದ ರಾಘವೇಂದ್ರಸ್ವಾಮಿಗಳವರ ಮೂರ್ತಿ ಹಾಗೂ ಪ್ರಶಸ್ತಿ ಪತ್ರ ನೀಡಿ ಪ್ರೋತ್ಸಾಹಿಸಲಾಯಿತು..

ಮುಖ್ಯ ಅತಿಥಿಗಳಾಗಿ ಬ್ರಾಹ್ಮಣ ಸಮಾಜದ ಮುಖಂಡರಾದ ಎಂ.ಕೆ. ಗೌರಕರ ಹಾಗೂ ವಿಜಯಲಕ್ಷ್ಮೀ ತುರುವಿಹಾಳ ಮಾತನಾಡಿ, ವಶಿಷ್ಠಧಾಮವು ಸೇವಾರೂಪದಲ್ಲಿ ಮಾಡುವ ಕಾರ್ಯಕ್ರಮಗಳು ಅತ್ಯಂತ ಶ್ಲಾಘನೀಯವಾಗಿದೆ ಎಂದರು. ವಶಿಷ್ಠಧಾಮ ಸೇವಾ ಟ್ರಸ್ಟ್‌ನ ಮಹಿಳಾ ಮಂಡಳಿಯ ಅಧ್ಯಕ್ಷರಾದ ಶೋಭಾ ನವಲಿ ಉಪಸ್ಥಿತರಿದ್ದರು.

ಕು॥ಅಕ್ಷತಾ ವೆಂಕೊಬ ಭಗವದ್ಗೀತಾ ಪಾರಾಯಣ , ಶ್ರೀಮತಿ ರೇಣುಕಾ ಕುಲಕರ್ಣಿ ನಿರೂಪಣೆ, ನಿವೃತ್ತ ಹಿರಿಯ ಶಿಕ್ಷಕ ಪಾಂಡುರಂಗ ದೇಸಾಯಿ ಸ್ವಾಗತ ಹಾಗೂ ಮೂರ್ತಿ ಚನ್ನಳ್ಳಿ ವಂದನಾರ್ಪಣೆ ಮಾಡಿದರು.

## ನೇಕಾರರ ಸಮುದಾಯ ಭವನಕ್ಕೆ ಶೀಘ್ರವೇ ಅನುದಾನ : ಆರ್ ಬಸನಗೌಡ ತುರ್ವಿಹಾಳ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಪಟ್ಟಣದ ಪದ್ಮಶಾಲಿ ನೇಕಾರ ಸಮಾಜದ ಕುಲದೇವರಾದ ಶ್ರೀ ಮಾರ್ಕಂಡೇಶ್ವರ ದೇವಸ್ಥಾನ ದಲ್ಲಿ ಸಾಮೂಹಿಕ ಜನಿವಾರ ಧಾರಣೆ ಹಾಗೂ 55 ನೇ ವರ್ಷದ ಪಲ್ಲಕ್ಕಿ ಉತ್ಸವ ಕಾರ್ಯಕ್ರಮದಲ್ಲಿ ಭಾಗಿಯಾದ ಶಾಸಕ ಆರ್ ಬಸನಗೌಡ ತುರ್ವಿಹಾಳ ಮಾರ್ಕಂಡೇಯನ ಆಶೀರ್ವಾದ ಪಡೆದು,ಮಾತಾಡಿ ನೇಕಾರ ಸಮಾಜವು ಎಲ್ಲಾ ಕ್ಷೇತ್ರದಲ್ಲಿ ಸಮಾಜಕ್ಕೆ ಬಹುದೊಡ್ಡ ಕೊಡುಗೆಯನ್ನು ಕೊಟ್ಟಿದ್ದಾರೆ, ಸಮಾಜದ ಬೇಡಿಕೆಯಾದ ಮಸ್ಕಿ



ಪಟ್ಟಣದಲ್ಲಿ ಆದಷ್ಟು ಶೀಘ್ರವೇ ಸಮುದಾಯದ ಭವನ ಮಾಡಲಾಗುತ್ತದೆ ಎಂದು ಹೇಳಿದರು. ಸಮಾಜದ ಅಧ್ಯಕ್ಷ ಲಕ್ಷ್ಮಣ ಕರ್ಲಿ ಸಮುದಾಯ ಭವನ,ಇನ್ನಿತರ ವಿಷಯವಾಗಿ ಶಾಸಕರಿಗೆ ಮನವಿ ಸಲ್ಲಿಸಿದರು.ಉದ್ಘಾಟಿಸಿ ಮಾತನಾಡಿದ ಉತ್ತರ ಕರ್ನಾಟಕ ಪ್ರಾಂತಿಯ ಪದ್ಮಶಾಲಿ ಸಂಘದ ಪ್ರಧಾನ ಕಾರ್ಯದರ್ಶಿ ಈರಣ್ಣ ಕರ್ಲಿ ಸಮಾಜ ಏಳಿಗೆಗೆ ಶಿಕ್ಷಣ ಹಾಗೂ ಸಂಘಟಿತರಾಗುವುದು ಮುಖ್ಯವಾಗಿದೆ.

ಈ ನಿಟ್ಟಿನಲ್ಲಿ ಬೀದರನಿಂದ ಹಾವೇರಿವರೆಗೆ ಸಮಾಜವನ್ನು ವೆಂಕಟೇಶ ಸಾಕಾ ಇವರ ಕಾರ್ಯಕ್ಕೆ ನಾವೆಲ್ಲಾ ಕೈಜೋಡಿಸೋಣ ಎಂದರು. ಈ ಸಂದರ್ಭದಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳನ್ನು ಹಾಗೂ ಸಮಾಜ ಸೇವಕರಿಗೆ ಸನ್ಮಾನವನ್ನು ಮಾಡಲಾಯಿತು. ಈ ವೇಳೆಯಲ್ಲಿ ಸಮಾಜದ ಅಧ್ಯಕ್ಷ ಲಕ್ಷ್ಮಣ ಕರ್ಲಿ, ಅತಿಥಿಗಳಾಗಿ ಕೃಷ್ಣ ಡಿ ಚಿಗರಿ, ಮಲ್ಲಯ್ಯ ಪಗಡೇಕಲ್, ಡಾ ಶಂಕರ ಕರ್ಲಿ, ವೀರೇಶ ಪೂಜಾರಿ, ವೆಂಕಟೇಶ್ ಪಗಡೇಕಲ್, ಪರಶುರಾಮ ಕೊಡಗುಂಟಿ, ಪರಶುರಾಮ ದೇವರೆಡ್ಡಿ, ಮುನಿಯಪ್ಪ ಕರ್ಲಿ, ಮಲ್ಲಿಕಾರ್ಜುನ ಶ್ಯಾಸಲ್, ರಾಘವೇಂದ್ರ ಚಿನ್ನಿ ಹಾಗೂ ಸಮಾಜದ ಅನೇಕರು ಬಾಗವಹಿಸಿದ್ದರು.

## ಬರದ ಪಟ್ಟಿಯಿಂದ ಕುಷ್ಟಗಿ ಔಟ್ ಶಾಸಕ ಆಕ್ರೋಶ! ಒಂದು ವಾರದಲ್ಲಿ ಬರಪೀಡಿತ ತಾಲೂಕು ಘೋಷಿಸದಿದ್ದರೆ ರೈತರೊಂದಿಗೆ ಹೋರಾಟ ದೊಡ್ಡನಗೌಡ ಪಾಟೀಲ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ರಾಜ್ಯ ಸರ್ಕಾರ ಗುರುವಾರ ಪ್ರಕಟಿಸಿರುವ 101 ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಕುಷ್ಟಗಿಗೆ ಸ್ಥಾನ ನೀಡದಿರುವುದಕ್ಕೆ ಶಾಸಕ ದೊಡ್ಡನಗೌಡ ಪಾಟೀಲ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಪ್ರಸಕ್ತ ಸಾಲಿನ ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟ ಪರಿಣಾಮ ಕುಷ್ಟಗಿ ತಾಲೂಕಿನಲ್ಲಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳೆಗಳು ಒಣಗುತ್ತಿದ್ದು, ಕೃಷಿ ಚಟುವಟಿಕೆಗಳು ತೀವ್ರ ಹಿನ್ನಡೆ ಕಂಡಿವೆ. ಇಂತಹ ಪರಿಸ್ಥಿತಿಯಲ್ಲೂ ಕುಷ್ಟಗಿಯನ್ನು ಬರಪೀಡಿತ ತಾಲೂಕುಗಳ ಪಟ್ಟಿಯಿಂದ ಕೈಬಿಟ್ಟಿರುವುದು ಸರಿಯಾದ ಕ್ರಮವಲ್ಲ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಾಸಕ ದೊಡ್ಡನಗೌಡ ಪಾಟೀಲ, "ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಅವರು ಸರ್ಕಾರಕ್ಕೆ ವರದಿ ಸಲ್ಲಿಸಿದ್ದರೂ ಕುಷ್ಟಗಿಯನ್ನು ಪಟ್ಟಿಯಿಂದ ಕೈಬಿಟ್ಟಿರುವುದು ತೀವ್ರ ಅಸಮಾಧಾನ ತಂದಿದೆ. ಇದನ್ನು ಒಪ್ಪಲು ಸಾಧ್ಯವಿಲ್ಲ" ಎಂದರು. ಕೇವಲ ಮಳೆ ಮಾಪನದ ಅಂಕಿ-ಅಂಶಗಳನ್ನು ಪರಿಗಣಿಸದೆ, ತಾಲೂಕಿನಲ್ಲಿ ಒಟ್ಟಾರೆ ಮಳೆಯ ಪ್ರಮಾಣ, ಬೆಳೆಗಳ ಸ್ಥಿತಿ ಹಾಗೂ ಕೃಷಿ ಪರಿಸ್ಥಿತಿಯನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ಬರ ಘೋಷಿಸಬೇಕು ಎಂದು ಒತ್ತಾಯಿಸಿದರು. ಕುಷ್ಟಗಿಯನ್ನು ಬರಪೀಡಿತ ತಾಲೂಕು ಎಂದು ಘೋಷಿಸುವ ಕುರಿತು ಸರ್ಕಾರದೊಂದಿಗೆ ಚರ್ಚಿಸಲಾಗಿದ್ದು, ಒಂದು ವಾರದೊಳಗೆ ಕ್ರಮ ಕೈಗೊಳ್ಳುವ ಭರವಸೆ ದೊರೆತಿದೆ ಎಂದು ತಿಳಿಸಿದರು. ಒಂದು ವಾರದೊಳಗೆ ಬರಪೀಡಿತ ತಾಲೂಕು ಎಂದು ಘೋಷಿಸದಿದ್ದರೆ ರೈತರೊಂದಿಗೆ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದ ಅವರು, ರೈತರಿಗೆ ನಿಯಮಾನುಸಾರ ಬೆಳೆ ನಷ್ಟ ಪರಿಹಾರ ಸೇರಿದಂತೆ ಅಗತ್ಯ ನೆರವು ಒದಗಿಸಬೇಕು ಎಂದು ಆಗ್ರಹಿಸಿದರು.

## ಬರಪೀಡಿತ ಪ್ರದೇಶಗಳೆಂದು ಘೋಷಿಸಲು ಆಗ್ರಹ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ರಾಜ್ಯದಲ್ಲಿ ಸಮರ್ಪಕ ಮಳೆಯಾಗದೆ ಬರದ ಪರಿಸ್ಥಿತಿ ನಿರ್ಮಾಣವಾಗಿದ್ದು, ವಿಜಯಪುರ ಜಿಲ್ಲೆಯ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅದರಲ್ಲೂ ದೇವರ ಹಿಪ್ಪರಗಿ ಹಾಗೂ ತಾಳಿಕೋಟಿ ತಾಲೂಕುಗಳಲ್ಲಿ ಕಳೆದ ಮೂರು ತಿಂಗಳಿಂದ ಸಕಾಲಕ್ಕೆ ಮಳೆಯಾಗದೆ ಬಿತ್ತನೆ ಮಾಡಿರುವ ಬೆಳೆಗಳು ಒಣಗುತ್ತಿವೆ.

ಈ ಹಿನ್ನೆಲೆಯಲ್ಲಿ ಎರಡೂ ತಾಲೂಕುಗಳನ್ನು ತಕ್ಷಣ ತೀವ್ರ ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ರೈತರಿಗೆ ಮಧ್ಯಂತರ ಪರಿಹಾರ ನೀಡಬೇಕು ಎಂದು ಬಿಜೆಪಿ ಮುಖಂಡ ಬಸನಗೌಡ ಎಸ್.ಪಾಟೀಲ (ಯಡಿಯಾಪುರ) ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಕುರಿತು ಶನಿವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು ಅಲ್ಪಸ್ವಲ್ಪ ಮಳೆಯಾದ ಸಂದರ್ಭದಲ್ಲಿ ರೈತರು ತಮ್ಮಲ್ಲಿದ್ದ ಹಣ ಹಾಗೂ ಸಾಲ ಮಾಡಿ ಬೀಜ, ಗೊಬ್ಬರ ಖರೀದಿಸಿ ಬಿತ್ತನೆ ಮಾಡಿದ್ದಾರೆ. ಆದರೆ ಮಳೆ ಕೈಕೊಟ್ಟಿರುವುದರಿಂದ ಬೆಳೆಗಳು ಒಣಗುತ್ತಿದ್ದು, ರೈತರು ಹಾಕಿದ ಬಂಡವಾಳ ಕಳೆದುಕೊಳ್ಳುವ ಆತಂಕ ಎದುರಾಗಿದೆ. ಸರ್ಕಾರ ಕೂಡಲೇ ಸಮಗ್ರ ಬೆಳೆ ಸಮೀಕ್ಷೆ ನಡೆಸಿ, ಅರ್ಹ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.



ಬರದಿಂದ ರೈತರು ಹಾಗೂ ಕೃಷಿ ಕೂಲಿಕಾರರು ಉದ್ಯೋಗಕ್ಕಾಗಿ ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗದಂತೆ ತಕ್ಷಣ ಬರ ಪರಿಹಾರ ಕಾಮಗಾರಿಗಳನ್ನು ಆರಂಭಿಸಿ ಸ್ಥಳೀಯವಾಗಿ ಉದ್ಯೋಗ ಕಲ್ಪಿಸಬೇಕು. ದೇವರ ಹಿಪ್ಪರಗಿ ಹಾಗೂ ತಾಳಿಕೋಟಿ ತಾಲೂಕುಗಳ ವ್ಯಾಪ್ತಿಯಲ್ಲಿರುವ ಕೆರೆಗಳನ್ನು ಸಾಧ್ಯವಾದಷ್ಟು ಶೀಘ್ರವಾಗಿ ತುಂಬಿಸಿ, ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ವಿಜಯಪುರ ಜಿಲ್ಲೆಯ ಬರಪೀಡಿತ ಪಟ್ಟಿಯಿಂದ ವಂಚಿತವಾಗಿರುವ ತಾಲೂಕುಗಳ ಶಾಸಕರು ಹಾಗೂ ಉಸ್ತುವಾರಿ ಸಚಿವರು ಸದನದಲ್ಲಿ ಸರ್ಕಾರದ ಗಮನ ಸೆಳೆದು, ಅರ್ಹ ಎಲ್ಲಾ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲು ಒತ್ತಡ ಹೇರಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಇದಲ್ಲದೆ, ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರ ಕೂಡಲೇ ಮಧ್ಯಂತರ ಪರಿಹಾರ ಬಿಡುಗಡೆ ಮಾಡಬೇಕು. ಬೆಳೆ ವಿಮೆ ಮಾಡಿಸಿರುವ ಅರ್ಹ ರೈತರಿಗೆ ಬೆಳೆ ನಷ್ಟಕ್ಕೆ ಅನುಗುಣವಾಗಿ ವಿಮಾ ಮೊತ್ತವನ್ನು ಯಾವುದೇ ವಿಳಂಬವಿಲ್ಲದೆ ಸಕಾಲಕ್ಕೆ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿರುವ ಅವರು ರೈತರ ಸಂಕಷ್ಟದ ಬಗ್ಗೆ ಸರ್ಕಾರ ನಿರ್ಲಕ್ಷ್ಯ ವಹಿಸಿದರೆ ರೈತರ ಪರವಾಗಿ ಸರ್ಕಾರದ ವಿರುದ್ಧ ರಸ್ತೆಗಿಳಿದು ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಅನ್ನದಾತನ ಬದುಕು ಉಳಿಸುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ರೈತರ ಕಣ್ಣೀರು ಒರೆಸುವ ನಿಟ್ಟಿನಲ್ಲಿ ತಕ್ಷಣ ಬರ ಪರಿಹಾರ ಘೋಷಿಸಿ ಅಗತ್ಯ ನೆರವು ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಶಿಕ್ಷಣದಿಂದ ಜ್ಞಾನವಂತರಾಗಬೇಕು ಜೂಗಲ್ ಮಂಜುನಾಯಕ

❑ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ವಚನಗಳು ಸಾಮಾನ್ಯ ಜನರ ನಾಡಿಮಿಡಿತಗಳಾಗಿ, ವೈಚಾರಿಕ ಮತ್ತು ವೈಜ್ಞಾನಿಕ ಮನೋ ಚಿಂತನೆಗೆ ತಮ್ಮ ಕಾಯಕದ ಮೂಲಕ ಮಹತ್ವವನ್ನು ಶಿವಶರಣರು ನೀಡಿದ್ದಾರೆ ಎಂದು ತಹಶೀಲ್ದಾರ್ ಜೂಗಲ್ ಮಂಜುನಾಯಕ ಹೇಳಿದರು.



ಪಟ್ಟಣದ ತಹಶೀಲ್ದಾರ್ ಕಛೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಬ್ರಹ್ಮಶ್ರೀ ನಾರಾಯಣ ಗುರು, ಶ್ರೀನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿ, 12ನೇ ಶತಮಾನದ ಕಾಲದಲ್ಲಿ ಭಾಷೆಯಲ್ಲಿ ಸಾಕಷ್ಟು ಬದಲಾವಣೆ ಗಳಾಗಿವೆ. ನಮ್ಮಲ್ಲಿರುವ ಮೂಢನಂಬಿಕೆಗಳಿಗೆ ಜೋತು ಬೀಳದೆ ಆಧುನಿಕ ಭಾರತದ ನಿರ್ಮಾಣಕ್ಕೆ ಪ್ರಾಮುಖ್ಯತೆ ನೀಡಬೇಕು. ಕಾಯಕ ನಿಷ್ಠೆಯಲ್ಲಿ ನುಲಿಯ ಚಂದಯ್ಯರಂತಹ ಶರಣರ ತತ್ವ ಸಿದ್ಧಾಂತಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜನ ಸಮೂಹವನ್ನು ಕತ್ತಲೆಯ ಅಂಧಕಾರ ದಿಂದ ಬೆಳಕಿನೆಡೆಗೆ ಕೊಂಡೊಯ್ದ ಶ್ರೀ ನಾರಾಯಣ ಗುರುಗಳು ಸಮಾಜಕ್ಕೆ ಒಂದು ದಿಕ್ಕನ್ನು ತೋರಿಸಿಕೊಟ್ಟವರು. ಕ್ರಾಂತಿ ಪುರುಷರಾದ ಅವರಿಗೆ ಭಗವಂತನ ಸಾಕ್ಷಾತ್ಕಾರವಾಗಿತ್ತು. ಶಿಕ್ಷಣದಿಂದ ಜ್ಞಾನವಂತರಾಗಬೇಕು ಎಂದರು. ಈ ಸಂದರ್ಭದಲ್ಲಿ ಪ್ರಭಾರಿ ಉಪ ತಹಶೀಲ್ದಾರ್ ರಮೇಶ, ಶಿರಸ್ತೇದಾರ ಪಂಪಾಪತಿ, ಕಂದಾಯ ನಿರೀಕ್ಷಕ ಸುರೇಶ, ಆರ್ಯ ಈಡಿಗರ ಸಮಾಜದ ಅಧ್ಯಕ್ಷ ಇ. ನರಸಪ್ಪ, ಬಸವರಾಜ, ಗಂಗಾಧರಗೌಡ, ಧನ್ ರಾಜ್, ಇ.ಕೆ.ಶ್ರೀನಿವಾಸ, ಶಿವುಕುಮಾರ, ಲಕ್ಷ್ಮೀ, ಇಪಿ ಇದ್ದಪ್ಪ, ವೆಂಕಟೇಶ, ಕೊರಚ ಕೊರಮ ಕೊರವರ ಸಮಾಜದ ಅಧ್ಯಕ್ಷ ಕೆ.ಯಂಕಪ್ಪ, ಕಾರ್ಯದರ್ಶಿ ವಿರುಪಾಕ್ಷಿ, ಮುಖಂಡರಾದ ಹನುಮಂತಪ್ಪ, ಶ್ರೀನಿವಾಸ, ಶಿವರಾಜ, ಸುಧೀರ್, ವಿರೇಶ, ರಾಮ, ರಾಮಕೃಷ್ಣ ಸೇರಿದಂತೆ ಸಿಬ್ಬಂದಿ ಇದ್ದರು.

## ಮೈಸೂರು ನಾಡ ಹಬ್ಬ ದಸರಾ ಆನೆಗಳ ತಂಡಕ್ಕೆ ಮೈಸೂರು ಅರಮನೆಯಲ್ಲಿ ಅದ್ದೂರಿಯಾಗಿ ಸ್ವಾಗತ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಆಗಸ್ಟ್ 28 ವಿಶ್ವವಿಖ್ಯಾತ ಮೈಸೂರು ದಸರಾ ನಾಡಹಬ್ಬಮಹೋತ್ಸವದಲ್ಲಿ ಪಾಲ್ಗೊಳ್ಳುವ ಆನೆಗಳನ್ನು ಅರಣ್ಯ ಸಚಿವ ರಾಮಲಿಂಗ ರೆಡ್ಡಿ ರವರ ನೇತೃತ್ವದಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರ ಸಮ್ಮುಖದಲ್ಲಿ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು ಇಂದು ಮೈಸೂರು ಅರಮನೆಗೆ ಆಗಮಿಸಿದ ಗಜಪಡೆಗೆ ಪೂಜೆ ಸಲ್ಲಿಸುವ ಮೂಲಕ ಸ್ವಾಗತ ಕೋರಿ ಬರಮಾಡಿಕೊಳ್ಳಲಾಯಿತು.

ಇದೇ ವೇಳೆ ಮಾತನಾಡಿದ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರು ಈ ಬಾರಿಯ ನಾಡಹಬ್ಬ ದಸರಾ ಮಹೋತ್ಸವ ಬಹಳ ವಿಜೃಂಭಣೆಯಿಂದ ಜರುಗಳಿದ್ದು ಯಾವುದೇ ತೊಂದರೆಯಾಗದಂತೆ



ಯಶಸ್ವಿಯಾಗಿ ಈ ಮಹೋಸವ ಜರುಗಲಿ ಎಂದು ದೇವರಲ್ಲಿ ಪ್ರಾರ್ಥಿಸಿ ಸಂಪ್ರದಾಯಿಕವಾಗಿ ಸಂಪ್ರದಾಯಬದ್ಧವಾಗಿ ದಸರಾ ಆನೆಗಳಿಗೆ ಪೂಜಿ ಸಲ್ಲಿಸಿ ಪರ ಪುಷ್ಪನೆ ಇಡೀ ಗೌರವ ಸಲ್ಲಿಸಿದ್ದೇವೆ ಎಂದು ಅಲ್ಲದೆ ಆನೆಯ ಮಾವುತರು ಹಾಗೂ ಪಾಲಕರ ಗಳಿಗೆ ಹಾಗೂ ಅಧಿಕಾರಿ ವರ್ಗದವರಿಗೂ ಸಹ ನಾವು ಈ ಸಂದರ್ಭದಲ್ಲಿ ಈ ದಸರಾ ಮಹೋತ್ಸವ ಬಹಳ ಯಶಸ್ವಿಯಾಗಿ ನಡೆಯಲು ಶ್ರಮಿಸುವಂತೆ ತಿಳಿಸಿದ್ದೇವೆ ಎಂದರು

ಈ ಸಂದರ್ಭದಲ್ಲಿ ಸಚಿವರಾದ ರಾಮಲಿಂಗ ರೆಡ್ಡಿ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಟಿ.ಎಸ್. ಶ್ರೀವತ್ಸ, ಜಿ.ಟಿ.ದೇವೇಗೌಡ, ಕೆ. ಹರೀಶ್ ಗೌಡ, ಎಂಎಲ್ಸಿಗಳಾದ ರಘು ಕೌಟಿಲ್ಯ, ಸಿ.ಎನ್. ಮಂಜೇಗೌಡ, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್ ಜಿಲ್ಲಾಧಿಕಾರಿ ಜಿ ರಶ್ಮಿಕಾಂತ್ ರೆಡ್ಡಿ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ರಾಕೇಶ್ ಪಾಪಣ್ಣ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಮಂಜುಳಾ ಮಂಜುನಾಥ ಎಪಿಎಂಸಿ ಮಾಜಿ ಅಧ್ಯಕ್ಷ ಬಂಡಿಪಾಳ್ಯ ಬಸವರಾಜ್ ಜಿಲ್ಲಾ ಪಂಚಾಯತಿ ತಾಲೂಕು ಪಂಚಾಯಿತಿಯ ಅಧಿಕಾರಿಗಳು ಸಿಬ್ಬಂದಿ ವರ್ಗದವರು ಹಾಗೂ ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು

## ಮೃತ ಹನುಮಂತ ಸಾವಿನ ಆರೋಪಿಗೆ ಒಂದು ವರ್ಷ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಿದ ನ್ಯಾಯಾಲಯ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಲಿಂಗಸಗೂರು ಪೋಲಿಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಕಲ್ಬುರ್ಗಿ ಮುಖ್ಯ ರಸ್ತೆಯ ಯರಡೋಣ ಕ್ರಾಸ್ ಆದನಗೌಡ ಪರಾಂಪೂರು ಇವರ ಹೊಲದ ಹತ್ತಿರ ದಿನಾಂಕ 17-04-2025 ರಂದು ರಾತ್ರಿ 10-00 ಗಂಟೆಗೆ ಆರೋಪಿತನಾದ ದಾದಪೀರ್ ತಂದೆ ಹುಸೇನ್ ಸಾಬ್ ಸಫಾರಿ ಸಾ: ಮೇದಿನಾಳ ತಾ: ಕುಷ್ಟಗಿ ಜಿ: ಕೊಪ್ಪಳ ಈತನು ಶೀಲವಂತ ಮತ್ತು ಆತನ ಅಣ್ಣ ಮೃತ ಹನುಮಂತ ಮತ್ತು ಮಾಳುಗುಂಡಮ್ಮ ತಂದೆ ಅಮರಪ್ಪ ಸಾ: ದೇವರಭೂಪುರು ಇವರನ್ನು ಮೋಟರ್ ಸೈಕಲ್ ನಂ ಕೆಎ-36 ಈಆರ್: 2889 ನ ಹಿಂದೆ ಕುಡಿಸಿಕೊಂಡು ಮದುವೆ ಸಾಮಾನುಗಳನ್ನು ತರಲು ದೇವರಭೂಪುರುದಿಂದ ಲಿಂಗಸಗೂರಿಗೆ ಬಂದು ಮದುವೆ ಸಾಮಾನುಗಳನ್ನು ತೆಗೆದುಕೊಂಡು ವಾಪಸ್ ತಮ್ಮೂರಿಗೆ ಇಬ್ಬರನ್ನು ಕೂಡಿಸಿಕೊಂಡು ರಸ್ತೆಯ ಎಡಗಡೆಯಿಂದ ಹೊರಟಿದ್ದಾಗ ಕಲ್ಬುರ್ಗಿ ಕಡೆಯಿಂದ ಬುಲೊರೋ ವಾಹನ ಕೆಎ-28 ಸಿ-5181 ವಾಹನವನ್ನು ಅತಿವೇಗ ಮತ್ತು ಅಲಕ್ಷ್ಯತನದಿಂದ ನಡೆಸಿಕೊಂಡು ಬಂದು ನಿಯಂತ್ರಿಸಲಾಗದೇ ಮುಂದಿನಿಂದ ಮೋಟರ್ ಸೈಕಲ್ ಸವಾರರಿಗೆ ಡಿಕ್ಕಿ ಹೊಡೆದಿದ್ದರಿಂದ ತಲೆಗೆ ಬಲವಾದ ಪೆಟ್ಟು ಬಿದ್ದು ರಕ್ತಸ್ರಾವವಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದು ಮತ್ತು ಶೀಲವಂತ, ಮಾಳಗುಂಡಮ್ಮಳಿಗೆ ಸಾದಾ ಸ್ವರೂಪದ ಗಾಯಗಳಾಗಿದ್ದು ಆರೋಪಿಯು ಅಪಘಾತ ಪಡಿಸಿ ಸ್ಥಳದಿಂದ ಓಡಿ ಹೋಗಿದ್ದು ಶೀಲವಂತ, ನೀಡಿದ ದೂರಿನ ಅನ್ವಯ ಅಂದಿನ ತನಿಖಾಧಿಕಾರಿ ಪುಂಡಲಿಕ ಪಟಾತರ್ ಪಿ,ಐ ಇವರು ಪ್ರಕರಣದ ತನಿಖೆ ಕೈಗೊಂಡು ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತಾರೆ. ವಾದ ವಿವಾದಗಳನ್ನು ಆಲಿಸಿದ ಪ್ರಧಾನ ಜೆಎಮ್ಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಅಂಬಣ್ಣ ಕೆ. ರವರು ಪ್ರಕರಣದ ವಿಚಾರಣೆ ನಡೆಸಿ ಸಾಕ್ಷಿದಾರರ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲಿಸಿ ಆರೋಪಿಯು ಕಲಂ 281, 125 (ಎ), 125(ಬಿ), 106 (1), ಬಿಎನ್ಎಸ್-2023 ಮತ್ತು ಕಲಂ 187 ಆಯ್ಎಮ್ವಿ ಕಾಯ್ದೆ ಅಡಿಯಲ್ಲಿ ಆರೋಪ ಎಸೆಗಿರುವುದು ರುಜುವಾತಾಗಿದ್ದು



ಆರೋಪಿಗೆ ಒಂದು ವರ್ಷ ಕಾರಗೃಹ ಶಿಕ್ಷೆ ಮತ್ತು ರೂ 6500/- ದಂಡ ವಿಧಿಸಿ ತೀರ್ಪು ನೀಡಿದ್ದಾರೆ . ಸರ್ಕಾರದ ಪರವಾಗಿ ವಿರುಪಣ್ಣ ದುಮತಿ, ಸಹಾಯಕ ಸರ್ಕಾರಿ ಅಭಿಯೋಜಕರು, ವಾದ ಮಂಡಿಸಿರುತ್ತಾರೆ ಹಾಗೂ ಬಸವರಾಜ ಮತ್ತು ತಿಮ್ಮಯ್ಯ ಪೊಲೀಸ ಪೇದೆಗಳು ಸಾಕ್ಷಿದಾರರನ್ನು ಸರಿಯಾದ ಸಮಯಕ್ಕೆ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆಂದು ಪತ್ರಿಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

## ನೇಮಕಾತಿ ಪ್ರಕಟಣೆ

**KSRLPS ನೇಮಕಾತಿ 2026 ಕ್ಲಸ್ಟರ್ ಸೂಪರ್‌ವೈಸರ್ ಮತ್ತು ಜಿಲ್ಲಾ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ 18 ಆಗಸ್ಟ್ 2026**

KSRLPS ನೇಮಕಾತಿ 2026: 8 ಕ್ಲಸ್ಟರ್ ಸೂಪರ್‌ವೈಸರ್ ಮತ್ತು ಜಿಲ್ಲಾ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿವೃದ್ಧಿ ಸಂಘವು (KSRLPS) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಕ್ಲಸ್ಟರ್ ಸೂಪರ್‌ವೈಸರ್ ಮತ್ತು ಜಿಲ್ಲಾ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಚಾಮರಾಜನಗರದಲ್ಲಿ ಕರ್ನಾಟಕ ಸರ್ಕಾರದ ಅಡಿಯಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 31–ಆಗಸ್ಟ್–2026 ರೊಳಗೆ ಅಥವಾ ಅಂದು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: ksrlps.karnataka.gov.in

## ಕೊಲೆಯಾದ ರಾಣೇಮ್ಮ ಮನೆಗೆ ಸಹಾಯಕ ಆಯುಕ್ತರು ಹಾಗೂ ತಹಸೀಲ್ದಾರ್ ಭೇಟಿ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಕೊಲೆಯಾದ ಕರಡಕಲ್ ನ ರಾಣೇಮ್ಮ ಮನೆಗೆ ಸಹಾಯಕ ಆಯುಕ್ತ ಬಸಣ್ಣೆಪ್ಪ ಕಳಶೆಟ್ಟಿ ಹಾಗೂ ತಹಸೀಲ್ದಾರ್ ಸತ್ಯಮ್ಮ ಬೇಟಿ ನೀಡಿ ಅವರ ಕುಟುಂಬಕ್ಕೆ ಸಾಂತ್ವನ ಹೇಳಿದರು .**



ಕುಟುಂಬದ ದುಃಖದಲ್ಲಿ ಭಾಗಿಯಾಗಿ, ಅವರ ಕುಟುಂಬಕ್ಕೆ ಆಹಾರ ಕಿಟ್ ಗಳನ್ನು ನೀಡಿದರು ಸರ್ಕಾರದ ವತಿಯಿಂದಲೂ ಸೂಕ್ತ ಪರಿಹಾರ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು ಆರೋಪಿಗಳನ್ನು ಈಗಾಗಲೇ ಬಂಧಿಸಲಾಗಿದ್ದು ಪ್ರಕರಣದ ಕುರಿತು ಕಾನೂನು ಬದ್ಧವಾಗಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು . ಮೃತರ ಕುಟುಂಬಕ್ಕೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದರು . ಸಂದರ್ಭದಲ್ಲಿ ರಾಮಕೃಷ್ಣ ಮೋಹನ್ ಗೊಸ್ಲೆ ಸೇರಿದಂತೆ ಇತರರು ಇದ್ದರು .

## ಕುಷ್ಟಗಿ ಪಿಎಲ್‌ಡಿ ಬ್ಯಾಂಕ್‌ಗೆ ನೂತನ ಅಧ್ಯಕ್ಷರಾಗಿ ಶಿವಯ್ಯ ಕಡಿವಾಲ ಆಯ್ಕೆ ರೈತರು ಹಾಗೂ ಸಾರ್ವಜನಿಕರ ಹಿತಾಸಕ್ತಿಗೆ ಆದ್ಯತೆ ನೂತನ ಅಧ್ಯಕ್ಷ

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ತಾಲೂಕಿನ ಪಿಎಲ್‌ಡಿ ಬ್ಯಾಂಕ್‌ನ ನೂತನ ಅಧ್ಯಕ್ಷರಾಗಿ ಶ್ರೀ ಶಿವಯ್ಯ ಕಡಿವಾಲ ಅವರು ಆಯ್ಕೆಯಾಗಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಶಿವಯ್ಯ ಕಡಿವಾಲ ಅವರು, ತಮ್ಮ ನೇತೃತ್ವದಲ್ಲಿ ಬ್ಯಾಂಕ್ ಇನ್ನಷ್ಟು ಅಭಿವೃದ್ಧಿ ಹೊಂದುವಂತೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.**




ರೈತರು ಹಾಗೂ ಸಾರ್ವಜನಿಕರ ಹಿತಾಸಕ್ತಿಗೆ ಆದ್ಯತೆ ನೀಡಿ, ಬ್ಯಾಂಕ್‌ನಿಂದ ದೊರೆಯುವ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸಲು ಹಾಗೂ ಅವರ ಸಮಸ್ಯೆಗಳಿಗೆ ಉತ್ತಮವಾಗಿ ಸ್ಪಂದಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಬ್ಯಾಂಕ್ ರೈತರಿಗೆ ಆರ್ಥಿಕವಾಗಿ ನೆರವಾಗುವ ಸಂಸ್ಥೆಯಾಗಿದ್ದು, ರೈತರ ಅಗತ್ಯಗಳಿಗೆ ಅನುಗುಣವಾಗಿ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವುದಾಗಿ ಅವರು ಹೇಳಿದರು. ಈ ಸಂದರ್ಭದಲ್ಲಿ ಶಾಸಕರಾದ ದೊಡ್ಡನಗೌಡ ಎಚ್. ಪಾಟೀಲ, ಬಿಜೆಪಿ ಮುಖಂಡ ಕೆ. ಮಹೇಶ, ಸಂಗನಗೌಡ ಜೈನರ, ವಿಜಯಕುಮಾರ ಹಿರೇಮಠ, ಮಾಂತಯ್ಯ ಅರಳಲಿಮಠ, ಪ್ರಭು ಶಂಕರಗೌಡ ಪಾಟೀಲ, ಚಂದ್ರಶೇಖರ ನಾಲತವಾಡ, ಬಸವರಾಜ ಕಾಮನೂರು, ಶಶಿಧರ ಕೌವಲಿ, ಶಂಕರ ಹೊರಪೇಟೆ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಚಿವ ರಘುಮೂರ್ತಿಗೆ ವಾಲ್ಮೀಕಿ ನಾಯಕ ಮುಖಂಡರ ಭೇಟಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಕರ್ನಾಟಕ ಸರ್ಕಾರ ಪರಿಶಿಷ್ಟ ಪಂಗಡ ಕಲ್ಯಾಣ ಖಾತೆ ಸಚಿವರಾದ ಟಿ. ರಘುಮೂರ್ತಿ ಇವರನ್ನು ಕಲ್ಯಾಣ ಕರ್ನಾಟಕ ಭಾಗದ ವಾಲ್ಮೀಕಿ ನಾಯಕ ಸಮಾಜದ ಮುಖಂಡರು ಇತ್ತೀಚಿಗೆ ಬೆಂಗಳೂ–ರಿನಲ್ಲಿ ಭೇಟಿ ಮಾಡಿದರು. ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ವಾಲ್ಮೀಕಿ ನಾಯಕ ಸಮಾಜ ಬಾಂಧವರು ಹಲವಾರು ಗಂಭೀರ ಸಮಸ್ಯೆಗಳನ್ನು ಸಚಿವರ ಗಮನಕ್ಕೆ ತಂದು ಚರ್ಚಿಸಲಾಯಿತು.**



ಸಮಾಜದ ಮುಖಂಡರು ಮುಂದಿಟ್ಟ ಸಮಸ್ಯೆಗಳಿಗೆ ಉತ್ತಮ ಸ್ಪಂದನೆ ನೀಡಿದ ಸಚಿವರು,ಈ ಎಲ್ಲ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲು ಪ್ರಯತ್ನಿಸಲಾಗುವುದು ಎಂದರು. ನಿಯೋಗದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ವಾಲ್ಮೀಕಿ ನಾಯಕ ಸಮಾಜದ ವಿಭಾಗೀಯ ಅಧ್ಯಕ್ಷರಾದ ನಂದಕುಮಾರ ಮಾಲಿಪಾಟೀಲ, ಮರಿಯಪ್ಪ ನಾಯಕ ಮಗ್ದಂಪೂರ, ಶ್ರವಣಕುಮಾರ ನಾಯಕ, ದೇವೇಂದ್ರಪ್ಪ ಗೌಡ ಗೌಡ್ಗೇರಿ, ಮಾರುತಿ ಜಮಾದಾರ, ಗುರುರಾಜ ಸುಬೇದಾರ, ರಾಜ್ಯ ನೌಕರ ಸಂಘದ ಅಧ್ಯಕ್ಷ ಜಗದೀಶ ಮೂರ್ತಿ, ಜಿಲ್ಲಾ ಅಧ್ಯಕ್ಷ ಅಶೋಕ ದೊರೇಗೋಳ, ರಾಜ್ಯ ಎಸ್ಸಿ ಎಸ್ಟಿ ನಕಲಿ ಜಾತಿ ತಡೆ ಸಮಿತಿ ಅಧ್ಯಕ್ಷ ರಘುವೀರ್ ನಾಯಕ್, ಮ–ರಿಸ್ವಾಮಿ ಬಳ್ಳಾರಿ ಸಾಹೇಬರೆಡ್ಡಿ ಎಲ್ಲಾ ಲಿಂಗ ಠಾಣೆದಾರ ಶ್ರೀಧರ್ ನಾಯಕ್ ತುಮಕೂರು ಎಲ್ಲಪ್ಪ ನಾಯಕ್ ಬಸವರಾಜ್ ದೊಡ್ಡಮನಿ ಸಂತೋಷ ಅರ್ವಾಳ, ಮಹಾಂತೇಶದೊರೆ ಮರಿಸ್ವಾಮಿ, ಬಳ್ಳಾರಿ

## ಹದಿಹರೆಯದ ಕಾಲಘಟ್ಟವನ್ನು ಜೀವನದಲ್ಲಿ ಉನ್ನತ ಗುರಿ ಸಾಧನೆಗಾಗಿ ಸೂಕ್ತ ಮಾರ್ಗದರ್ಶನದೊಂದಿಗೆ ಸಮಯೋಚಿತ ನಿರ್ಧಾರ ಕೈಗೊಳ್ಳಿ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ಹದಿಹರೆಯದ ಮಕ್ಕಳಿಗೆ ಸೂಕ್ತ ಕಾಳಜಿವಹಿಸಿ ಅವರ ವೈಯಕ್ತಿಕ ಆರೋಗ್ಯದ ಜೊತೆ ಜೊತೆಗೆ ದೈಹಿಕ ಮತ್ತು ಮಾನಸಿಕ ಬದಲಾವಣೆಗಳ ಕುರಿತು ಜಾಗೃತಿ ನೀಡುವುದ–ರಿಂದ ಭವಿಷ್ಯದಲ್ಲಿ ಆರೋಗ್ಯವಂತ ವ್ಯಕ್ತಿಯನ್ನಾಗಿ ರೂಪಿಸಬಹುದು ಎಂದು ಹದಿಹರೆಯದವರ ಆಪ್ತ ಸಮಾಲೋಚಕಿ ಮಹಾದೇವಿ ತಿಳಿಸಿದರು.**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮುದಾಯ ಆರೋಗ್ಯ ಕೇಂದ್ರ ಕವಿತಾಳ ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಸರಕಾರಿ ಪ್ರಥಮ ದರ್ಜೆ ಕಾಲೇಜನಲ್ಲಿ ಹಮ್ಮಿಕೊಂಡ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ಋತುಚಕ್ರದ ಅವದಿಯಲ್ಲಿ ವೈಯಕ್ತಿಕ ಸ್ವಚ್ಛತೆಕ್ಕೆ ಹೆಚ್ಚು ಗಮನ ನೀಡಬೇಕು, ಮದುವೆಯ ವಯಸ್ಸು ಹೆಣ್ಣಿಗೆ 18 ವರ್ಷ ಗಂಡಿಗೆ 21




ವರ್ಷವೆನ್ನುವುದನ್ನು ಕಾನೂನಿನೊಂದಿಗೆ ಬಾಲ್ಯ ವಿವಾಹದ ದುಷ್ಪರಿಣಾಮಗಳು, ಬಾಲ ಗರ್ಭಿಣಿಯರಿಗೆ ಆಗುವ ಸಮಸ್ಯೆಗಳನ್ನು ನಾವೆಲ್ಲರೂ ಗಮನಿಸಬೇಕು ಇದಕ್ಕಾಗಿ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಕಿಶೋರಿ ಸ್ವಾಸ್ಥ್ಯ ಕಾರ್ಯಕ್ರಮದಡಿರುವ ಸ್ನೇಹಕ್ಲಿನಿಕ್‌ನ ಸದುಪಯೋಗ ಪಡೆಯಲು ತಿಳಿಸಿದರು.

ಪ್ರಾಂಶುಪಾಲರಾದ ರವಿಕಿರಣ್ ಮಾತನಾಡಿ ಬಗ್ಗೆ ಆರಂಭದಲ್ಲಿ ಹವ್ಯಾಸವಾಗಿ ನಂತರ ಚಟವಾಗಿ ಬದಲಾಗುವ ದುಶ್ಚಟಗಳಾದ, ಮದ್ಯಪಾನ, ದೂಮ್ರಪಾನ, ಗಾಂಜಾ, ಅಪೀಮು, ಜಗಿಯುವ ತಂಬಾಕಿನ ಉತ್ಪನ್ನಗಳು ಕೇವಲ ಆರೋಗ್ಯದ ಮೇಲೆ ದುಷ್ಪರಿಣಾಮಗಳಲ್ಲದೆ ಸಮಾಜಘಾತಕ ಕ್ರೀಯೆಗಳನ್ನು ಸಹ ಮಾಡಿಸಲು ಪ್ರೇರೆಪಿಸುತ್ತದೆ, ಅದ್ದರಿಂದ ಹದಿಹರೆಯದವರು, ತಮ್ಮ ತಂದೆ–ತಾಯಿ, ಪಾಲಕರು, ಗುರುಗಳು, ಹಿತೈಷಿಗಳು ಹೇಳುವ ನುಡಿಗಳಿಗೆ ಗೌರವ ನೀಡಿ ತಮ್ಮ ಗುರಿಯನ್ನು ಸಾಧಿಸಿ ಎಂದು ವಿಂತಿಸಿದರು. ಇದೆ ವೇಳೆ ಎಲ್ಲಾ ವಿದ್ಯಾರ್ಥಿಗಳಿಗೆ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಡಿ ನೋಟ್ ಬುಕ್ ಪೆನ್‌ಗಳನ್ನು ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಉಪನ್ಯಾಸಕಿ ಪ್ರೇಮಾ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೇಲ್ವಿಚಾರಕ ಕೊಟ್ರಯ್ಯ ಸಾಲಿಮಠ, ಜಾಗೃತಿ ಸಮಿತಿ ಸದಸ್ಯರು ಅಮರೇಶ್ ದಿನ್ನಿ, ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಿಂಧನೂರಿನಲ್ಲಿ ಉಚಿತ ಆಯುಷ್ ಆರೋಗ್ಯ ಶಿಬಿರ ಯಶಸ್ವಿ

## ಉತ್ತಮ ಜೀವನಶೈಲಿಯಿಂದ ಕೀಲು–ಮೂಳೆ ಸಮಸ್ಯೆ ನಿಯಂತ್ರಣ ಸಾಧ್ಯ – ಡಾ. ಅಮ್ಜದ್ ಶರೀಫ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ರಾಷ್ಟ್ರೀಯ ಆಯುಷ್ ಅಭಿಯಾನ ಹಾಗೂ ಸರಕಾರಿ ಯುನಾನಿ ಚಿಕಿತ್ಸಾಲಯ, ಸಿಂಧನೂರು ಇವರ ಸಂಯುಕ್ತ ಆಶ್ರಯದಲ್ಲಿ 27 ಆಗಸ್ಟ್ ದಂದು ನಗರದ ಜನತಾ ಕಾಲೋನಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕೀಲು, ಮೂಳೆ ವ್ಯಾಧಿಗಳು ಮತ್ತು ವಯೋಮಿತ್ರ ಆರೋಗ್ಯ ಆಯುಷ್ ಶಿಬಿರವು ಅತ್ಯಂತ ಯಶಸ್ವಿಯಾಗಿ ನೆರವೇರಿತು.**

ವಳಬಳ್ಳಾರಿಯ ಶ್ರೀ ಚನ್ನಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಶ್ರೀ ಪಂಪಾಪತಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, "ಹಿರಿಯ ನಾಗ–ರಿಕರ ವಯೋಸಹಜ ಕಾಯಿಲೆಗಳಿಗೆ ಆಯುಷ್ ಮತ್ತು ಯುನಾನಿ ಚಿಕಿತ್ಸಾ ಪದ್ಧತಿ ಅತ್ಯಂತ ಪರಿಣಾಮಕಾರಿಯಾಗಿದೆ. ಸಾರ್ವಜನಿಕರು ಇಂತಹ ಉಚಿತ ಸರಕಾರಿ ಶಿಬಿರಗಳ ಪ್ರಯೋಜನವನ್ನು ಹೆಚ್ಚಿನ ಸಂಖ್ಯೆಯಲ್ಲಿ



ಪಡೆದುಕೊಳ್ಳಬೇಕು" ಎಂದು ಕರೆ ನೀಡಿದರು.

ಸರಕಾರಿ ಯುನಾನಿ ಚಿಕಿತ್ಸಾಲಯದ ವೈದ್ಯಾಧಿಕಾರಿಗಳಾದ ಡಾ. ಅಮ್ಜದ್ ಶರೀಫ್ ಹಾಗೂ ಡಾ. ಆಯಿಶಾ ತಹಸೀನ್ ಅವರು ಆಗಮಿಸಿದ್ದ ನೂರಾರು ರೋಗಿಗಳಿಗೆ ಕೀಲು ನೋವು, ಮೂಳೆ ಸವೆತ, ವಾತ ಕಾಯಿಲೆ ಹಾಗೂ ವಯೋಸಹಜ ಆರೋಗ್ಯ ಸಮಸ್ಯೆಗಳಿಗೆ ಸೂಕ್ತ ವೈದ್ಯಕೀಯ ಸಲಹೆ ನೀಡಿ, ಉಚಿತ ತಪಾಸಣೆ ನಡೆಸಿದರು. ಶುಶ್ರೂಷಾಧಿಕಾರಿ ರಾಜಪ್ಪ ಅವರು ಶಿಬಿರಕ್ಕೆ



ಆಗಮಿಸಿದ ಪ್ರತಿಯೊಬ್ಬ ಹಿರಿಯ ನಾಗರಿಕರಿಗೆ ರಕ್ತದೊತ್ತಡ (BP) ಹಾಗೂ ಮಧುಮೇಹ (Sugar) ತಪಾಸಣೆ ನಡೆಸಿ ಅಗತ್ಯ ಮಾಹಿತಿ ನೀಡಿದರು.

ಫಾರ್ಮಸಿ ಅಧಿಕಾರಿ ಭಾರ್ಗವ ಅವರು ತಪಾಸಣೆಗೊಳಗಾದ ರೋಗಿಗಳಿಗೆ ಗುಣಮಟ್ಟದ ಆಯುಷ್ ಮತ್ತು ಯುನಾನಿ ಔಷಧಗಳನ್ನು ಉಚಿತವಾಗಿ ವಿತರಿಸಿದರು. ಆಶಾ ಕಾರ್ಯಕರ್ತೆ ನಜ್ಮಾ ಬೇಗಂ ಅವರು ಸ್ಥಳೀಯ ಸಾರ್ವಜನಿಕರನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಚಿಕಿತ್ಸಾಲಯದ ಸಿಬ್ಬಂದಿಗಳಾದ ವಿಶ್ವನಾಥ ಮತ್ತು ಖಲಂದರ್ ಅವರು ಶಿಬಿರದ ಅಚ್ಚುಕಟ್ಟಾದ ವ್ಯವಸ್ಥೆಗೆ ಶ್ರಮಿಸಿದರು.

ಶಿಬಿರದಲ್ಲಿ ವೈದ್ಯರು ಹಿರಿಯ ನಾಗ–ರಿಕರಿಗಾಗಿ ನಿಯಮಿತ ಲಘು ವ್ಯಾಯಾಮ, ಮೂಳೆಗಳ ಬಲವರ್ಧನೆಗೆ ಅಗತ್ಯವಿರುವ ಪೌಷ್ಟಿಕ ಆಹಾರ ಪದ್ಧತಿ (ಕ್ಯಾಲ್ಸಿಯಂ ಮತ್ತು ವಿಟಮಿನ್ ಡಿ ಭರಿತ ಆಹಾರ), ಉಪ್ಪು–ಸಕ್ಕರೆಯ ಹಿತಮಿತ ಬಳಕೆ ಹಾಗೂ ಮಾನಸಿಕ ಶಾಂತಿಗೆ ಪ್ರಾಣಾಯಾಮದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು. ಮುಂದಿನ ದಿನಗಳಲ್ಲಿ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲೂ ಇಂತಹ ಉಚಿತ ಆರೋಗ್ಯ ಶಿಬಿರಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ. ಜನತಾ ಕಾಲೋನಿ ಹಾಗೂ ಸುತ್ತಮುತ್ತಲಿನ ಹಿರಿಯ ನಾಗರಿಕರು ಮತ್ತು ಸಾರ್ವಜನಿಕರು ಈ ಶಿಬಿರದಲ್ಲಿ ಪಾಲ್ಗೊಂಡು ಉಚಿತ ಸೇವೆಯ ಪ್ರಯೋಜನ ಪಡೆದುಕೊಂಡರು.

## ಬಿಜೆಪಿ ಕುತಂತ್ರದಿಂದಾಗಿ ನಾಗೇಂದ್ರ 2 ಬಾರಿ ರಾಜೀನಾಮೆ ಕೊಡುವಂತಾಗಿದೆ : ಪರಮೇಶ್ವರ್

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಸಚಿವ ಸ್ಥಾನಕ್ಕೆ ಬಿ. ನಾಗೇಂದ್ರ ರಾಜೀನಾಮೆ ನೀಡುವ ಅಗತ್ಯ ಇರಲಿಲ್ಲ. ಬಿಜೆಪಿಯವರ ಕುತಂತ್ರದಿಂದಾಗಿ ಅವರು ಎರಡು ಬಾರಿ ರಾಜೀನಾಮೆ ನೀಡುವಂತಾಗಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಜನತಾ ನ್ಯಾಯಾಲಯದ ಮುಂದೆ ಕಾಂಗ್ರೆಸ್ ವಸ್ತುಸ್ಥಿತಿಯನ್ನು ಮಂಡಿಸಲಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.**

ಮೈಸೂರಿನಲ್ಲಿ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದ ಬಳಿಕ ಪಕ್ಷದ ಕಾರ್ಯಕರ್ತರ ಮನೆಗೆ ಭೇಟಿ ನೀಡಿದ ಅವರು, ಸುದ್ದಿಗಾರರೊಂದಿಗೆ ಮಾತನಾಡಿದರು.

ಯಾವುದೇ ಅಪರಾಧ ಮಾಡದಿದ್ದರೂ ನಾಗೇಂದ್ರ ಅವರು ಎರಡು ಬಾರಿ ರಾಜೀನಾಮೆ



ನೀಡುವಂತೆ ಬಿಜೆಪಿಯವರು ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ಪಕ್ಷ, ಸರ್ಕಾರ ಹಾಗೂ ಮುಖಂಡರಿಗೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ಶಿಸ್ತಿನ ಸಿಪಾಯಿಯಂತೆ ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಆದ–'ರೆ, ಅದರ ಅಗತ್ಯ ಖಂಡಿತ ಇರಲಿಲ್ಲ ಎಂದರು.

ಸಿಬಿಐ ಅಥವಾ ಜಾರಿ ನಿರ್ದೇಶನಾಲಯದ ತನಿಖೆಯಲ್ಲಾಗಲಿ ನಾಗೇಂದ್ರ ಅವರ ಹೆಸರು ಎಲ್ಲಿಯೂ ಪ್ರಸ್ತಾಪವಾಗಿರಲಿಲ್ಲ. ಅವರಿಂದ ಯಾವುದೇ ಹಣ ವಸೂಲಾಗಿರಲಿಲ್ಲ. ತಾವು ಹಿಂದೆ ಗೃಹ ಸಚಿವರಾಗಿದ್ದಾಗಲೇ ದುರುಪಯೋಗವಾಗಿದ್ದ 84 ಕೋಟಿ ರೂ. ಮರುವಸೂಲಿ ಕಾರ್ಯ ಆರಂಭವಾಗಿತ್ತು. ಈ ಪೈಕಿ 79 ಕೋಟಿ ರೂ. ವಾಪಸ್ ಪಡೆಯಲಾಗಿದ್ದು, ಇನ್ನೂ 5 ಕೋಟಿ ರೂ. ಬಾಕಿ ಇದೆ ಎಂದು ತಿಳಿಸಿದರು.

"ಎಲ್ಲಿಯೂ ನಾಗೇಂದ್ರ ಅವರ ಹೆಸರು ಕೇಳಿಬರಲಿಲ್ಲ. ಸಿಬಿಐನ ದೋಷಾರೋಪಣಾ ಪಟ್ಟಿಯಲ್ಲೂ ಅವರ ಹೆಸರು ಇರಲಿಲ್ಲ. ಅನಾವಶ್ಯಕವಾಗಿ ಆರೋಪ ಮಾಡಿ ಬಿಜೆಪಿಯವರು ನಾಗೇಂದ್ರ ರಾಜೀನಾಮೆ ನೀಡುವಂತೆ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ವಸ್ತುಸ್ಥಿತಿಯನ್ನು ಜನಸಾಮಾನ್ಯರಿಗೆ ತಿಳಿಸುತ್ತೇವೆ" ಎಂದು ಹೇಳಿದರು.

ನಾಗೇಂದ್ರ ಅವರು ಎರಡು ಬಾರಿ ರಾಜೀನಾಮೆ ನೀಡಿರುವುದರಿಂದ ಸರ್ಕಾರಕ್ಕೆ ಮುಜುಗರವಾಗಿರುವುದು ನಿಜ. ಅದಕ್ಕಾಗಿಯೇ ವಿಧಾನಸಭೆಯಲ್ಲಿ ನೋಟಿಸ್ ನೀಡಿ ಚರ್ಚೆಗೆ ಅವಕಾಶ ಕಲ್ಪಿಸುವಂತೆ ವಿರೋಧ ಪಕ್ಷಗಳಿಗೆ ಹಲವು ಬಾರಿ ಹೇಳಿದ್ದೆವು. ಅವರ ಬಳಿ ಇರುವ ಸಾಕ್ಷ್ಯಗಳನ್ನು ಸದನದಲ್ಲಿ ಮಂಡಿಸುವಂತೆ ಸವಾಲು ಹಾಕಿದ್ದೆವು. ಸರ್ಕಾರವೂ ಅದಕ್ಕೆ ಉತ್ತರಿಸಲು ಸಿದ್ಧವಿತ್ತು. ಆದ–'ರೆ, ವಿರೋಧ ಪಕ್ಷಗಳು ಅದ್ಯಾವುದನ್ನೂ ಮಾಡದೆ ರಾಜಕೀಯ ಮಾಡುವುದರಲ್ಲೇ ಕಾಲಹರಣ ಮಾಡಿವೆ ಎಂದು ತಿರುಗೇಟು ನೀಡಿದರು. ಮುಂದಿನ ದಿನಗಳಲ್ಲಿ ಈ ವಿಚಾರವನ್ನು ಕಾಂಗ್ರೆಸ್ ಸಮರ್ಥವಾಗಿ ಎದುರಿಸಲಿದೆ ಎಂದು ಪರಮೇಶ್ವರ್ ಹೇಳಿದರು.

## ಶಿಕ್ಷಣ ಕ್ರಾಂತಿಯ ಹರಿಕಾರರು, ತ್ರಿವಿಧ ದಾಸೋಹಿಗಳಾದ 'ರಾಜಗುರುತಿಲಕ' ಪರಮಪೂಜ್ಯರ ಸೇವೆ ಅನನ್ಯ. ಮುಖ್ಯಮಂತ್ರಿ ಡಿಕೆ ಶಿವಕುಮಾರ್

ನೈಜ್ಯ ದೆಸೆ ನ್ಯೂಸ್

**ತಾಂಡವಪುರ: ಮೈಸೂರು ಜಿಲ್ಲೆಯ ಶ್ರೀ ಸುತ್ತೂರು ಮಠದಲ್ಲಿ ಹಮ್ಮಿಕೊಂಡಿದ್ದ ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀಮನ್ಮಹಾರಾಜ 'ರಾಜಗುರುತಿಲಕ' ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 111ನೇ ಜಯಂತಿ ಮಹೋತ್ಸವದ ಉದ್ಘಾಟನೆಯನ್ನು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಸ್ವಾಮೀಜಿಗಳ ಸೇವೆಯನ್ನು ನೆನಪಿಸಿಕೊಂಡು ಅವರ ಸ್ಮರಣೆ ಮಾಡಿದರು**

ನಾನು ಮುಖ್ಯಮಂತ್ರಿಯಾದ ಮೇಲೆ ಮೈಸೂರು ಜಿಲ್ಲೆಯ ಎರಡು ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಮೊದಲ ಕಾರ್ಯಕ್ರಮ ವಿವೇಕಾನಂದ ರವರ ಕಾರ್ಯಕ್ರಮ ಎರಡನೇದು ಸುತ್ತೂರು ಮಠದ




ಕಾರ್ಯಕ್ರಮದಲ್ಲಿ ಭಾಗಿಯಾಗಿರುವುದು ನನ್ನ ಭಾಗ್ಯ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ರವರು ತಮ್ಮ ಹಿಂಗಿ–ತವನ್ನು ವ್ಯಕ್ತಪಡಿಸಿ ಸಂತಸ ವ್ಯಕ್ತಪಡಿಸಿದರು ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಮಹೋತ್ಸವದಲ್ಲಿ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಗಳು, ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿಗಳು, ಆದಿಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿಗಳು, ಅವಧೂತ ದತ್ತ ಪೀಠದ ಶ್ರೀ ದತ್ತ ವಿಜಯಾನಂದ ತೀರ್ಥ ಮಹಾಸ್ವಾಮೀಜಿಗಳು, ಸಚಿವರಾದ ಶ್ರೀ ಪುಟ್ಟರಂಗಶೆಟ್ಟಿ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಸ್ ಯತೀಂದ್ರ ಸಿದ್ದರಾಮಯ್ಯ, ಸಂಸದರಾದ ಶ್ರೀ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಶ್ರೀ ತನ್ವೀರ್ ಸೇಠ್ ಹರೀಶ್ ಗೌಡ ಡಿ ರವಿಶಂಕರ್ ಹಾಗೂ ಹಲವು ವಿವಿಧ ಮಠಾಧೀಶರು



# ನೇಪಾಳ ಪ್ರವಾಹ : ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥ ಲಕ್ಷ್ ಗೋಪಿಸೆಟ್ಟಿ ನಾಪತ್ತೆ

ನೈಜ್ಯ ದೆಸೆ ನ್ಯೂಸ್

**ಕಠ್ಮಂಡು: ನೇಪಾಳ–ಟಿಬೆಟ್ ಗಡಿಯಲ್ಲಿ ಸಂಭವಿಸಿದ ಹಠಾತ್ ಪ್ರವಾಹ ಹಾಗೂ ಭೂಕುಸಿತದ ಭೀಕರ ದುರಂತದಲ್ಲಿ ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥ ಲಕ್ಷ್ ಗೋಪಿಸೆಟ್ಟಿ ಅವರು ನಾಪತ್ತೆಯಾಗಿದ್ದಾರೆ.**

ವೈಯಕ್ತಿಕ ಭೇಟಿಗಾಗಿ ನೇಪಾಳಕ್ಕೆ ತೆರಳಿದ್ದ ಅವರನ್ನು ಸದ್ಯಕ್ಕೆ ಸಂಪರ್ಕಿಸಲು ಸಾಧ್ಯವಾಗುತ್ತಿಲ್ಲ ಎಂದು ಇನ್ಫೋಸಿಸ್ ಕಂಪನಿ ಅಧಿಕೃತವಾಗಿ ಖಚಿತಪಡಿಸಿದೆ. ಗೋಪಿಸೆಟ್ಟಿ ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕಂಪನಿಯು ಸ್ಥಳೀಯ ಆಡಳಿತ ಹಾಗೂ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ. ನೇಪಾಳದ ಪ್ರವಾಹ ಪೀಡಿತ ಪ್ರದೇಶದಲ್ಲಿ ಒಟ್ಟು 320 ಭಾರತೀಯರು ನಾಪತ್ತೆಯಾಗಿದ್ದಾರೆ ಹಾಗೂ ಸುಮಾರು 400 ಮಂದಿ ಚೀನಾದ ಭಾಗದಲ್ಲಿ ಸಿಲುಕಿಕೊಂಡಿದ್ದಾರೆ ಎಂದು



ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಚೀನಾದ ಭಾಗದಲ್ಲಿ ಸಿಲುಕಿಕೊಂಡಿದ್ದವರ ಪೈಕಿ 153 ಭಾರತೀಯರು ಸುರಕ್ಷಿತವಾಗಿ ನೇಪಾಳ ಪ್ರವೇಶಿಸಿದ್ದಾರೆ.

ಸಂಕಷ್ಟದಲ್ಲಿರುವ ಭಾರತೀಯರನ್ನು ರಕ್ಷಿಸಿ ವಾಪಸ್ ಕರೆತರಲು ಅಗತ್ಯವಿರುವ ಎಲ್ಲ ನೆರವನ್ನು ನೇಪಾಳ ಸರ್ಕಾರಕ್ಕೆ ನೀಡಲು ಭಾರತ ಸಿದ್ಧವಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ."ನಮ್ಮ ಸಹೋದ್ಯೋಗಿ ಲಕ್ಷ್ ಗೋಪಿಸೆಟ್ಟಿ ಅವರ ಪತ್ತೆಗಾಗಿ ಸಂಬಂಧಪಟ್ಟ ಏಜೆನ್ಸಿಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದೇವೆ. ಈ ಕಷ್ಟದ ಸಮಯದಲ್ಲಿ ಅವರ ಕುಟುಂಬಕ್ಕೆ ಅಗತ್ಯವಿರುವ ಸಂಪೂರ್ಣ ಬೆಂಬಲವನ್ನು ನೀಡಲಾಗುತ್ತಿದೆ" ಎಂದು ಇನ್ಫೋಸಿಸ್ ಪ್ರಕಟಣೆಯಲ್ಲಿ ತಿಳಿಸಿದೆ.

ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯಸ್ಥರಾಗಿರುವ ಗೋಪಿಸೆಟ್ಟಿ ಅವರು ಸಾರ್ವಜನಿಕ ವಲಯದ ಸಂಸ್ಥೆಗಳಿಗೆ ತಂತ್ರಜ್ಞಾನ ಹಾಗೂ ಕಾರ್ಯಾಚರಣೆಗಳ ಕುರಿತು ಸಲಹೆ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಇನ್ಫೋಸಿಸ್‌ಗೆ ಸೇರುವ ಮೊದಲು ಆಕ್ಸೆಂಚರ್‌ನಲ್ಲಿ ವ್ಯವಸ್ಥಾಪಕ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದ ಅವರು, ಐಬಿಎಂ, ಪಿಡಬ್ಲ್ಯೂಸಿ ಹಾಗೂ ಎಚ್‌ಸಿಎಲ್‌ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಿದ್ದರು. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಿಲುಕಿರುವ ಇತರೆ ಭಾರತೀಯರ ರಕ್ಷಣೆ ಹಾಗೂ ನಾಪತ್ತೆಯಾಗಿರುವವರ ಪತ್ತೆಗಾಗಿ ರಾಜ–ತಾಂತ್ರಿಕ ಮತ್ತು ರಕ್ಷಣಾ ಮಟ್ಟದಲ್ಲಿ ತೀವ್ರ ಪ್ರಯತ್ನಗಳು ಮುಂದುವರಿದಿವೆ.

## ವಚನ ದರ್ಶನ

ಒಲ್ಲೆನೆಂಬುದು ವೈರಾಗ್ಯ ಒಲಿವೆನೆಂಬುದು ಕಾಯಗುಣ ಆವ ಪದಾರ್ಥವಾದಡೇನು ತನ್ನಿದ್ದೆಡೆಗೆ ಬಂದುದ ಲಿಂಗಾರ್ಪಿತವ ಮಾಡಿ ಭೋಗಿಸುವುದೆ ಆಚಾರ. ಕೂಡಲಸಂಗಮದೇವರನೊಲಿಸ ಬಂದ ಪ್ರಸಾದಕಾಯವ ಕೆಡಿಸಲಾಗದು

ಶರಣರ ಉಗಮವಾದ ಹನ್ನೊಂದನೇ ಶತಮಾನದ ಉತ್ತರಾರ್ಧದಲ್ಲಿ ಉದಯಿಸಿ 12ನೇ ಶತಮಾನದ ಕಡೆಯವರೆಗೂ ಬಸವಣ್ಣನವರ–ಜನಸಾಮಾನರ ಆಂದೋಲನದ ಭಾಗವಾಗಿ ಬೆಳೆದು ಬಂತು. ಇದು ಸಾಹಿತ್ಯ ಪರಿಭಾಷೆಯ ಒಂದು ವಿಶಿಷ್ಟ ಸಾಹಿತ್ಯ ಪ್ರಕಾರದ ಕಾವ್ಯ. ಹಾಡಿದರೆ ಹಾಡಾಗುವ, ಓದಿದರೆ ಗದ್ಯವಾಗುವ ಕನ್ನಡದ ವಿಶೇಷ ಕಾವ್ಯ ಪ್ರಕಾರ. ವಚನ ಸಾಹಿತ್ಯವು ತನ್ನ ಕಾಲದಲ್ಲಿನ ಜನರ ಮನೋಭಿವ್ಯಕ್ತಿಗೆ ಸಂಗಾತಿಯಾಯಿತು.ವಚನ ಎಂದರೆ 'ಪ್ರಮಾಣ', 'ಕೊಟ್ಟ ಮಾತು' ಎಂದರ್ಥ.

ವಿಶ್ವಗುರು ಭಕ್ತಿ ಭಂಡಾರಿ ಬಸವಣ್ಣನವರ ಅತ್ಯಂತ ಪ್ರಸಿದ್ಧ ಹಾಗೂ ಅರ್ಥಗರ್ಭಿತ ವಚನಗಳಲ್ಲೊಂದಾಗಿದೆ. ಈ ವಚನವು ಮನುಷ್ಯನ ಆಸೆ, ವೈರಾಗ್ಯ ಮತ್ತು ಭಕ್ತಿಯ ನಿಜವಾದ ಸ್ವರೂಪವನ್ನು ಸುಂದರವಾಗಿ ವಿವರಿಸುತ್ತದೆ.

ಒಲ್ಲೆನೆಂಬುದು ವೈರಾಗ್ಯ ಲೋಕದ ಭೋಗ–ಭಾಗ್ಯಗಳು ಬೇಡ, ಆಸೆಗಳೆಲ್ಲವನ್ನೂ ತ್ಯಜಿಸುತ್ತೇನೆ ಎಂದು ಬಾಯಲ್ಲಿ ಹೇಳಿಕೊಳ್ಳುವುದು ನಿಜವಾದ ವೈರಾಗ್ಯವಲ್ಲ. ಅದು ಕೇವಲ ಬಾಹ್ಯ ಪ್ರದರ್ಶನವಷ್ಟೇ.

ಒಲಿವೆನೆಂಬುದು ಕಾಯಗುಣ ಪ್ರಾಪಂಚಿಕ ವಸ್ತುಗಳ ಮೇಲೆ, ಸುಖಗಳ ಮೇಲೆ ಆಸೆ ಪಡುವುದು ಮನುಷ್ಯನ ದೇಹದ ಸಹಜ ಗುಣವಾಗಿದೆ (ಕಾಯಗುಣ).ಆವ ಪದಾರ್ಥವಾದಡೇನು ತಾನಿರ್ದೆಡೆಗೆ ಬಂದುದಲ್ಲದೆ: ನಮ್ಮ ಕರ್ಮ ಹಾಗೂ ಯೋಗ್ಯತೆಗೆ ತಕ್ಕಂತೆ ಯಾವುದೇ ವಸ್ತು ಅಥವಾ ಸೌಲಭ್ಯ ನಮ್ಮ ಬಳಿ ತಾನಾಗಿಯೇ ಬರುತ್ತದೆ. ಅದನ್ನು ಬಲವಂತವಾಗಿ ನಿರಾಕರಿಸುವ ಅಗತ್ಯವಿಲ್ಲ.

ಲಿಂಗಾರ್ಪಿತವಲ್ಲದುದ ಭೋಗಿಸದಿದ್ದಡೆ ನಮಗೆ ಸಿಕ್ಕ ಯಾವುದೇ ವಸ್ತುವನ್ನು ಮೊದಲು ದೇವರಿಗೆ ಲಿಂಗಕ್ಕೆ ಅರ್ಪಿಸಿ, ನಂತರ ಅದನ್ನು ಪ್ರಸಾದ ರೂಪದಲ್ಲಿ ಸ್ವೀಕರಿಸಬೇಕು. ಅಹಂಕಾರದಿಂದ ಅಥವಾ ಕೇವಲ ಸ್ವಾರ್ಥದ ಆಸೆಯಿಂದ ಯಾವುದನ್ನೂ ಅನುಭವಿಸಬಾರದು.

ಯಾರು ಎಲ್ಲವನ್ನೂ ದೇವರಿಗೆ ಅರ್ಪಿಸಿ, ಅನಾಸಕ್ತಿಯಿಂದ ಜೀವನ ನಡೆಸುತ್ತಾರೋ ಅಂಥವರಿಗೆ ಕೂಡಲಸಂಗಮದೇವನು ಒಲಿಯುತ್ತಾನೆ ಎಂದು ಬಸವಣ್ಣನವರು ಈ ವಚನದಲ್ಲಿ ಮಾರ್ಗದರ್ಶನ ನೀಡಿದ್ದಾರೆ. ಅಂದರೆ, ಸಂಸಾರವನ್ನು ಬಿಟ್ಟು ಓಡಿಹೋಗುವುದು ವೈರಾಗ್ಯವಲ್ಲ; ಸಂಸಾರದಲ್ಲಿದ್ದೂ ಭಗವಂತನಿಗೆ ಶರಣಾಗಿ ಬಾಳುವುದು ನಿಜವಾದ ವೈರಾಗ್ಯ ಎಂದು ಹೇಳಬಹುದು ಶರಣರ ವಚನಗಳು ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು. 998094144

## ಮತ್ತೊಂದು ಪ್ರವಾಹ ಸಾಧ್ಯತೆ : ನೇಪಾಳಕ್ಕೆ ಎಚ್ಚರಿಕೆ ನೀಡಿದ ಚೀನಾ

ನೈಜ್ಯ ದೆಸೆ ನ್ಯೂಸ್

**ಕಠ್ಮಂಡು: ನೇಪಾಳದ ಲೆಂಡೆ ನದಿ ವ್ಯವಸ್ಥೆಯ ಮೇಲ್ಭಾಗದಲ್ಲಿ ರೂಪುಗೊಂಡಿರುವ ಸರೋವರ ಯಾವುದೇ ಕ್ಷಣದಲ್ಲಿ ಒಡೆಯಬಹುದು ಎಂದು ಚೀನಾ ಮತ್ತೊಮ್ಮೆ ನೇಪಾಳಕ್ಕೆ ಎಚ್ಚರಿಕೆ ನೀಡಿದೆ.**

ಸರೋವರದ ನೀರಿನ ಬಣ್ಣದಲ್ಲಿ ಆಗುತ್ತಿರುವ ಬದಲಾವಣೆ ಹೆಚ್ಚುತ್ತಿರುವ ಅಪಾಯದ ಸೂಚನೆಯಾಗಿದೆ. ಸರೋವರ ಒಡೆದರೂ ನದಿಯ ಹರಿವು ಗರಿಷ್ಠ ಸೆಕೆಂಡಿಗೆ 500 ಘನ ಮೀಟರ್‌ಗಳಷ್ಟೇ ತಲುಪಬಹುದು. ಹೀಗಾಗಿ ಕೆಳಭಾಗದ ಪ್ರದೇಶಗಳಲ್ಲಿನ ನದಿಗಳ ಹರಿವು ಸ್ವಲ್ಪ ಹೆಚ್ಚಾಗಬಹುದೇ ಹೊರತು, ಗಮನಾರ್ಹ ಪ್ರಮಾಣದಲ್ಲಿ ಏರಿಕೆಯಾಗುವ ಸಾಧ್ಯತೆ ಕಡಿಮೆ ಎಂದು ಬೀಜಿಂಗ್ ತಿಳಿಸಿದೆ. ಈ ವಾರದ ಆರಂಭದಲ್ಲಿ ನೇಪಾಳ ಮತ್ತು ಟಿಬೆಟ್‌ನ ಕೆಲವು ಭಾಗಗಳನ್ನು ಮುಳುಗಿಸಿದ ಭೀಕರ ಪ್ರವಾಹದ ಬಳಿಕ ಈ ಸರೋವರ ರೂಪುಗೊಳ್ಳಲು ಆರಂಭಿಸಿದೆ. ಸರೋವರದ ನೀರಿನ ಬಣ್ಣ ನಿರಂತರವಾಗಿ



ಗಾಢವಾಗುತ್ತಿರುವುದು ಅದು ಯಾವುದೇ ಕ್ಷಣದಲ್ಲಿ ಒಡೆಯುವ ಸಾಧ್ಯತೆಯನ್ನು ಸೂಚಿಸುತ್ತದೆ ಎಂದು ಚೀನಾದ ಅಧಿಕಾರಿಗಳು ನೇಪಾಳದ ವಿದೇಶಾಂಗ ಸಚಿವಾಲಯದೊಂದಿಗೆ ಹಂಚಿಕೊಂಡ ಸಂದೇಶದಲ್ಲಿ ತಿಳಿಸಿದ್ದಾರೆ.

ಪ್ರವಾಸ ಕೈಪಿಡಿಗಳನ್ನು ಓದುವುದು ಸರೋವರದಲ್ಲಿನ ನೀರಿನ ಪ್ರಮಾಣ ಹೆಚ್ಚಾಗುತ್ತಿರುವುದರಿಂದ ಕೆಳಭಾಗದ ಪ್ರದೇಶಗಳಲ್ಲಿ ವಾಸಿಸುವ ಸಮುದಾಯಗಳು ಮುನ್ನೆಚ್ಚರಿಕೆ ವಹಿಸುವಂತೆ ಚೀನಾ ಅಧಿಕಾರಿಗಳು ಸಲಹೆ ನೀಡಿದ್ದಾರೆ. ನೇಪಾಳ ಮತ್ತು ಟಿಬೆಟ್‌ನಲ್ಲಿ ಭೀಕರ ಪ್ರವಾಹಕ್ಕೆ ಕಾರಣವಾಗಿದೆ ಎನ್ನಲಾದ ಹಿಮನದಿ ಕುಸಿತದ ಪರಿಣಾಮವಾಗಿ ಈ ನೈಸರ್ಗಿಕ ಅಣೆಕಟ್ಟು ಸರೋವರ ರೂಪುಗೊಂಡಿದೆ. ಕುಸಿದ ಶಿಲಾಖಂಡರಾಶಿಗಳು ನೈಸರ್ಗಿಕ ಅಣೆಕಟ್ಟಿನಂತೆ ನಿರ್ಮಾಣಗೊಂಡಿದ್ದು, ಅದರ ಹಿಂದೆ ನೀರು ಸಂಗ್ರಹವಾಗಿದೆ. ಚೀನಾದ ಕಡೆಯ ಚೋಚೆನ್ ನದಿ ಹಾಗೂ ನೇಪಾಳದ ಕಡೆಯ ಪುರೆಪು ನದಿಯ ಸಂಗಮದ ಸಮೀಪ ಈ ಸರೋವರ ರೂಪುಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚೀನಾದ ಜಲಸಂಪನ್ಮೂಲ ಸಚಿವಾಲಯದ ಪ್ರಕಾರ, ಸರೋವರದಲ್ಲಿನ ನೀರಿನ ಮಟ್ಟ ಕ್ರಮೇಣ ಏರುತ್ತಿದೆ. ನಿನ್ನೆಯವರೆಗೆ ಸರೋವರದಲ್ಲಿ ಸುಮಾರು 25 ಲಕ್ಷ ಘನ ಮೀಟರ್ ನೀರು ಸಂಗ್ರಹವಾಗಿದೆ. ಸರೋವರ ಒಡೆದರೆ ಸಂಭವಿಸಬಹುದಾದ ಹಾನಿಯ ಪ್ರಮಾಣವನ್ನು ಅಂದಾಜಿಸಲು ಚೀನಾ ಪ್ರವಾಹ ಮಾದರಿಯನ್ನು ರೂಪಿಸಿ ಅಧ್ಯಯನ ನಡೆಸಿದೆ. ಈ ಮೂಲಕ ಕೆಳಭಾಗದ ಪ್ರದೇಶಗಳ ಮೇಲೆ ಉಂಟಾಗಬಹುದಾದ ಪರಿಣಾಮವನ್ನು ನಿರ್ಣಯಿಸಲಾಗುತ್ತಿದೆ ಎಂದು ತಿಳಿಸಿದೆ.

## ನೇಪಾಳದಲ್ಲಿ ಸಿಲುಕಿರುವ ಭಾರತೀಯರ ರಕ್ಷಣೆ ತೀವ್ರಗೊಳಿಸಲು ಮೋದಿಗೆ ಖರ್ಗೆ ಪತ್ರ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಪ್ರವಾಹ ಪೀಡಿತ ನೇಪಾಳದಲ್ಲಿ ಸಿಲುಕಿರುವ ಎಲ್ಲಾ ಭಾರತೀಯರ ರಕ್ಷಣೆ ಹಾಗೂ ಸ್ಥಳಾಂತರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿ, ಅವರು ಸುರಕ್ಷಿತವಾಗಿ ಭಾರತಕ್ಕೆ ಮರಳಲು ಅಗತ್ಯ ವ್ಯವಸ್ಥೆ ಮಾಡುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.**

ಪ್ರಧಾನಿಗೆ ಬರೆದ ಪತ್ರದಲ್ಲಿ ಖರ್ಗೆ ಅವರು, ನೇಪಾಳ ಸರ್ಕಾರದೊಂದಿಗೆ ಸಮನ್ವಯ ಸಾಧಿಸಿ ಪ್ರವಾಹದಿಂದ ಬಾಧಿತವಾಗಿರುವ ಜನರಿಗೆ ಸಾಕಷ್ಟು ಮಾನವೀಯ ಹಾಗೂ ಪರಿಹಾರ ನೆರವು ಒದಗಿಸುವಂತೆಯೂ ಮನವಿ ಮಾಡಿದ್ದಾರೆ.

ನೆರೆಯ ರಾಷ್ಟ್ರದಲ್ಲಿ ಸಂಭವಿಸಿರುವ ವಿನಾಶಕಾರಿ ಪ್ರವಾಹದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಅವರು, ದುರಂತದಿಂದ ವ್ಯಾಪಕವಾಗಿ ಜೀವಹಾನಿ ಹಾಗೂ ಆಸ್ತಿಪಾಸ್ತಿ ನಷ್ಟ ಸಂಭವಿಸಿದೆ ಎಂದು ಹೇಳಿದ್ದಾರೆ. ಇತ್ತೀಚಿನ ಮಾಧ್ಯಮ ವರದಿಗಳನ್ನು



ಉಲ್ಲೇಖಿಸಿದ ಖರ್ಗೆ, 500ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದು, ಸುಮಾರು 1,000 ಮಂದಿ ನಾಪತ್ತೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ಈ ದುರಂತದಿಂದ ಸಾವಿರಾರು ಜನರಿಗೆ ಆಹಾರ, ಔಷಧ, ಆಶ್ರಯ ಹಾಗೂ ಇತರ ಅಗತ್ಯ ವಸ್ತುಗಳ ತುರ್ತು ಅಗತ್ಯ ಎದುರಾಗಿದೆ ಎಂದು ಅವರು ಹೇಳಿದ್ದಾರೆ. ನೇಪಾಳ ಸರ್ಕಾರದೊಂದಿಗೆ ಸಮನ್ವಯ ಸಾಧಿಸಿ ಸಂತ್ರಸ್ತರಿಗೆ ಅಗತ್ಯ ಮಾನವೀಯ ಹಾಗೂ ಪರಿಹಾರ ನೆರವು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಭಾರತೀಯರ ಸುರಕ್ಷತೆ ಬಗ್ಗೆ ಕಳವಳ ಪ್ರವಾಹದಿಂದ ನೇಪಾಳದ ವಿವಿಧ ಭಾಗಗಳಲ್ಲಿ ಸಿಲುಕಿರುವ ಭಾರತೀಯ ಪ್ರಜೆಗಳು ಹಾಗೂ ಭಾರತೀಯ ಮೂಲದವರ ಬಗ್ಗೆಯೂ ಖರ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಇತ್ತೀಚಿನ ಮಾಹಿತಿಯನ್ನು ಉಲ್ಲೇಖಿಸಿರುವ ಅವರು, ಸುಮಾರು 320 ಭಾರತೀಯ ಪ್ರಜೆಗಳು ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ತಿಳಿಸಿದ್ದಾರೆ. ಸಿಲುಕಿರುವವರ ರಕ್ಷಣೆ ಹಾಗೂ ಸ್ಥಳಾಂತರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿ, ಅವರು ಸುರಕ್ಷಿತವಾಗಿ ಹಾಗೂ ಶೀಘ್ರವಾಗಿ ಭಾರತಕ್ಕೆ ಮರಳಲು ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಪ್ರಧಾನಿ ಅವರನ್ನು ಒತ್ತಾಯಿಸಿದ್ದಾರೆ.

"ಈ ಕಷ್ಟದ ಸಮಯದಲ್ಲಿ ಭಾರತ ಸರ್ಕಾರ ಸಾಧ್ಯವಿರುವ ಎಲ್ಲ ನೆರವನ್ನು ಒದಗಿಸಲು ತಕ್ಷಣ ಕ್ರಮ ಕೈಗೊಳ್ಳಲಿದೆ ಎಂದು ನಾನು ಭಾವಿಸುತ್ತೇನೆ" ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ.

11 ಸದಸ್ಯರ ಭಾರತೀಯ ತಂಡ ನೇಪಾಳಕ್ಕೆ


ಏತನ್ಮಧ್ಯೆ, ಹಠಾತ್ ಪ್ರವಾಹದಿಂದ ಭಾರಿ ಹಾನಿಗೊಳಗಾದ ನೇಪಾಳದಲ್ಲಿ ಸ್ಥಳೀಯ ಅಧಿಕಾರಿಗಳಿಗೆ ನೆರವಾಗಲು 11 ಸದಸ್ಯರ ಭಾರತೀಯ ತಂಡ ಶನಿವಾರ ನೇಪಾಳ ತಲುಪಿದೆ.ವೈದ್ಯಕೀಯ ಸಿಬ್ಬಂದಿ ಹಾಗೂ ಸುರಂಗ ರಕ್ಷಣಾ ತಜ್ಞರನ್ನು ಒಳಗೊಂಡಿರುವ ಈ ತಂಡವನ್ನು ನೇಪಾಳ ಸರ್ಕಾರದ ಮನವಿ ಮೇರೆಗೆ ಕಳುಹಿಸಲಾಗಿದೆ ಎಂದು ಭಾರತೀಯ ರಾಯಭಾರ ಕಚೇರಿ ಮೂಲಗಳು ತಿಳಿಸಿವೆ.

ಹಿಮಾಲಯ ರಾಷ್ಟ್ರದಲ್ಲಿ ಹಠಾತ್ ಪ್ರವಾಹದಿಂದ ತೀವ್ರವಾಗಿ ಬಾಧಿತವಾಗಿರುವ ಪ್ರದೇಶಗಳಲ್ಲಿ ದೊಡ್ಡ ಪ್ರಮಾಣದ ರಕ್ಷಣಾ ಹಾಗೂ ಪರಿಹಾರ ಕಾರ್ಯಾಚರಣೆಗಳು ನಡೆಯುತ್ತಿವೆ. ರಸುವಾ ಸೇರಿದಂತೆ ಹಲವು ಪ್ರದೇಶಗಳು ಭಾರಿ ಪ್ರವಾಹಕ್ಕೆ ತುತ್ತಾಗಿದ್ದು, ವಸತಿ ಪ್ರದೇಶಗಳು, ರಸ್ತೆಗಳು, ಸೇತುವೆಗಳು ಹಾಗೂ ಜಲವಿದ್ಯುತ್ ಮೂಲಸೌಕರ್ಯಗಳಿಗೆ ವ್ಯಾಪಕ ಹಾನಿಯಾಗಿದೆ.

## ಸೋಮವಂಶ ಆರ್ಯ ಕ್ಷತ್ರಿಯ ಚಿತ್ರಗಾರ ಸಮಾಜದಿಂದ ಶ್ರಾವಣ ಮಾಸದ ನೂಲು ಹುಣ್ಣಿಮೆ ನಿಮಿತ್ತ ಶ್ರೀ ನಿಮಿಷಾಂಬ ದೇವಿಯ ಗಂಗೆ ಸ್ಥಳ, ಭವ್ಯ ಮೆರವಣಿಗೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಇಲ್ಲಿನ ಸೋಮವಂಶ ಆರ್ಯ ಕ್ಷತ್ರಿಯ ಚಿತ್ರಗಾರ ಸಮಾಜದ ವತಿಯಿಂದ ಶ್ರಾವಣ ಮಾಸದ ಪವಿತ್ರ ನೂಲು ಹುಣ್ಣಿಮೆಯ ಅಂಗವಾಗಿ ಶ್ರೀ ನಿಮಿಷಾಂಬ ದೇವಿಯ ಗಂಗೆ ಸ್ಥಳ ಹಾಗೂ ಭವ್ಯ ಮೆರವಣಿಗೆಯನ್ನು



**ಹಮ್ಮಿಕೊಳ್ಳಲಾಗಿತ್ತು. ದೇವಿಯ ಗಂಗೆ ಸ್ಥಳ ನೆರವೇರಿದ ನಂತರ,** ಮಂಗಲ ವಾದ್ಯಗಳೊಂದಿಗೆ ದೇವಿಯ ಭವ್ಯ ಮೆರವಣಿಗೆಯು ಊರಿನ ಪ್ರಮುಖ ಬೀದಿಗಳಲ್ಲಿ ಅತ್ಯಂತ ಸಡಗರ–ಸಂಭ್ರಮದಿಂದ ಜರುಗಿತು. ಇದೇ ಸಂದರ್ಭದಲ್ಲಿ ಶ್ರೀ ನಿಮಿಷಾಂಬ ದೇವಿ ದೇವಸ್ಥಾನದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳಾದ ಪಂಚಾಮೃತ ಅಭಿಷೇಕ ಮತ್ತು ಕುಂಕುಮಾರ್ಚನೆಗಳನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು. ಸಂಜೆ ದೇವಸ್ಥಾನದ ಆವರಣದಲ್ಲಿ ದೇವಿಯ ಪಲ್ಲಕ್ಕಿ ಉತ್ಸವ ಅದ್ದೂರಿಯಾಗಿ ನಡೆಯಿತು. ತದನಂತರ ಭಕ್ತಾದಿಗಳಿಗೆ ಮಹಾಪ್ರಸಾದ ವಿತರಣೆ ಮಾಡಲಾಯಿತು. ಈ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸಮಾಜದ ಅಧ್ಯಕ್ಷರಾದ ಎಸ್. ಜಿ. ಚಿತ್ರಗಾರ್, ಪ್ರಮುಖರಾದ ನಾಗರಾಜ್ ಉಭಾಳೆ, ರಾಜಣ್ಣ ಬೂಸಾರೆ, ನಾರಾಯಣ, ರಾಘವೇಂದ್ರ ಬೂಸಾರೆ, ರಾಜ ಕಾಂಬಳೆಕರ್, ಮಾರುತಿ, ವೆಂಕಟೇಶ್ ಚಿತ್ರಗಾರ್, ಶಶಿಧರ್, ವಾಸು, ಪ್ರಸಾದ್, ನಾಗರಾಜ್, ಗಜಾನನ, ಕೃಷ್ಣ, ಮುರಳಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ನೂರಾರು

## ಡಿಕೆಶಿ ಟೀಮ್‌ನ ಮೊದಲ ವಿಕೆಟ್ ಉರುಳಿಸಿದ ಬಿಜೆಪಿ, ಕಣ್ಣೀರಿಡುತ್ತ ನಾಗೇಂದ್ರ ರಾಜೀನಾಮೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ವರ್ಗಾವಣೆ ಹಗರಣ ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದ್ದು, ಅಂತಿಮವಾಗಿ ಸಚಿವ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಪ್ರಕರಣ–ಕ್ಕೆ ತಾತ್ಕಾಲಿಕ ರಾಜಕೀಯ ವಿರಾಮ ಬಿದ್ದಿದೆ.**

ಈ ಬೆಳವಣಿಗೆಯ ಹಿಂದೆ ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ನಡೆಸಿದ ಸಂಘಟಿತ ಹೋರಾಟ ಪ್ರಮುಖ ಪಾತ್ರ ವಹಿಸಿದೆ. ಸರ್ಕಾರದ ಮೇಲೆ ನಿರಂತರ ಒತ್ತಡ ಹೇರುವಲ್ಲಿ ಹಾಗೂ ಸದನದ ಒಳಗೆ ಮತ್ತು ಹೊರಗೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವಲ್ಲಿ ಎನ್‌ಡಿಎ ಮೈತ್ರಿಕೂಟ ಯಶಸ್ವಿಯಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬಿಜೆಪಿ ಮತ್ತು ಜೆಡಿಎಸ್ ನಡುವೆ ಅಷ್ಟೊಂದು ಬಲವಾದ ಸಮನ್ವಯತೆ ಕಂಡುಬಂದಿರಲಿಲ್ಲ. ಆದರೆ ವಾಲ್ಮೀಕಿ ನಿಗಮದ ಹಗರಣದ ವಿಷಯದಲ್ಲಿ ಎರಡೂ ಪಕ್ಷಗಳು ತಮ್ಮ ಆಂತರಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಂದೇ ವೇದಿಕೆಯಲ್ಲಿ ನಿಂತವು.

ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಪಕ್ಷಗಳು ಹಲವು ವಿಚಾರಗಳಲ್ಲಿ ಧ್ವನಿ ಎತ್ತಿದ್ದರೂ, ಬಿಜೆಪಿ ಮತ್ತು ಜೆಡಿಎಸ್ ಒಂದೇ ವಿಚಾರವನ್ನು ಕೇಂದ್ರವಾಗಿಸಿಕೊಂಡು ಉಭಯ ಸದನಗಳಲ್ಲೂ ಸಮನ್ವಯದಿಂದ ಹೋರಾಟ ನಡೆಸಿ ಸರ್ಕಾರದ ಮೇಲೆ ಪರಿಣಾಮ ಬೀರುವ ಮಟ್ಟಿಗೆ ಒತ್ತಡ ಸೃಷ್ಟಿಸಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.

ವಿಧಾನಮಂಡಲ ಅಧಿವೇಶನದ



ಸಂದರ್ಭದಲ್ಲಿ ಉಭಯ ಪಕ್ಷಗಳ ನಾಯಕರು ಜಂಟಿಯಾಗಿ ಸರ್ಕಾರದ ವಿರುದ್ಧ ಹೋರಾಟ ರೂಪಿಸಿದರು. ಸದನದ ಒಳಗೆ ಮತ್ತು ಹೊರಗೆ ಪ್ರತಿಭಟನೆಗಳನ್ನು ತೀವ್ರಗೊಳಿಸುವ ಮೂಲಕ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳುವಲ್ಲಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಯಶಸ್ವಿಯಾದರು. ಅಧಿವೇಶನದ ಆರಂಭದಿಂದಲೂ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದಿದ್ದ ಬಿಜೆಪಿ ಮತ್ತು ಜೆಡಿಎಸ್, ಯಾವುದೇ ಕಾರಣಕ್ಕೂ ಸರ್ಕಾರದ ಮೇಲಿನ ಒತ್ತಡವನ್ನು ಸಡಿಲಗೊಳಿಸಲಿಲ್ಲ. ನಿಗಮದ ಹಣ ಅಕ್ರಮವಾಗಿ ಬೇರೆಡೆಗೆ ವರ್ಗಾವಣೆಯಾಗಿದೆ ಎಂಬ ಗಂಭೀರ ಆರೋಪಗಳು ಹಾಗೂ ತನಿಖೆಯಲ್ಲಿ ಹೊರಬಂದ ಅಂಶಗಳು ಸರ್ಕಾರದ ನೈತಿಕತೆಯನ್ನೇ ಪ್ರಶ್ನಿಸುವಂತಾಗಿದ್ದವು.

ವಿರೋಧ ಪಕ್ಷಗಳ ಸಂಘಟಿತ ಹೋರಾಟದ ಪರಿಣಾಮ ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ, ಸಚಿವ ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವುದ–ರಿಂದ ಪಕ್ಷ ಹಾಗೂ ಸರ್ಕಾರದ ವರ್ಚಸ್ಸಿಗೆ ಮತ್ತಷ್ಟು ಹಾನಿಯಾಗಬಹುದು ಎಂಬ ನಿರ್ಧಾರಕ್ಕೆ ಬಂದರು ಎನ್ನಲಾಗಿದೆ. ಪರಿಣಾಮವಾಗಿ ರಾಜ–ಕೀಯ ಒತ್ತಡದ ನಡುವೆ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾಯಿತು.

ಈ ಬೆಳವಣಿಗೆ ರಾಜ್ಯದ ವಿರೋಧ ಪಕ್ಷಗಳಿಗೆ ಹೊಸ ಆತ್ಮವಿಶ್ವಾಸ ನೀಡಿದೆ. ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ನಿಂತರೆ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಮೇಲೆ ಎಷ್ಟು ಪರಿಣಾಮಕಾ–ರಿಯಾಗಿ ರಾಜಕೀಯ ಒತ್ತಡ ಹೇರಬಹುದು ಎಂಬುದು ಈ ಹೋರಾಟದಿಂದ ಸ್ಪಷ್ಟವಾಗಿದೆ. ಸ್ಥಳೀಯ ನಾಯಕರು ಹಾಗೂ ಪಕ್ಷದ ವರಿಷ್ಠ–ರಿಗೂ ಮೈತ್ರಿಕೂಟದ ಒಗ್ಗಟ್ಟಿನ ಶಕ್ತಿಯ ಅರಿವಾಗಿದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಇನ್ನಷ್ಟು ತೀವ್ರ ಹಾಗೂ ಸಂಘಟಿ–ತ ಹೋರಾಟಗಳನ್ನು ನಡೆಸಲು ಈ ಬೆಳವಣಿಗೆ ಎನ್‌ಡಿಎ ಮೈತ್ರಿಕೂಟಕ್ಕೆ ಬಲ ನೀಡುವ ಸಾಧ್ಯತೆಯಿದೆ. ಭ್ರಷ್ಟಾಚಾರದ ಆರೋಪಗಳನ್ನು ಮುಂದಿಟ್ಟುಕೊಂಡು ಸರ್ಕಾರದ ಜನಪ್ರಿಯತೆಗೆ ಧಕ್ಕೆ ತರಲು ವಿರೋಧ ಪಕ್ಷಗಳು ಈ ಬೆಳವಣಿಗೆಯನ್ನು ಮುಂದಿನ ದಿನಗಳಲ್ಲಿ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳುವ ಸಾಧ್ಯತೆಯೂ ಇದೆ. ನಾಗೇಂದ್ರ ಅವರ ರಾಜೀನಾಮೆಯನ್ನು ಬಿಜೆಪಿ–ಜೆಡಿಎಸ್ ಮೈತ್ರಿಕೂಟ ತನ್ನ ಹೋರಾಟದ ಮೊದಲ ಪ್ರಮುಖ ರಾಜಕೀಯ ಯಶಸ್ಸು ಎಂದು ಬಿಂಬಿಸಿಕೊಳ್ಳುವ ಸಾಧ್ಯತೆಯಿದೆ.

ಇಲ್ಲಿ ಮುಖ್ಯವಾಗುವುದು ಕೇವಲ ನಾಗೇಂದ್ರ ಅವರ ರಾಜೀನಾಮೆಯಲ್ಲ. ಬಿಜೆಪಿ ಮತ್ತು ಜೆಡಿಎಸ್ ಒಗ್ಗಟ್ಟಿನಿಂದ ಹೋರಾಟ ನಡೆಸಿದರೆ ಸರ್ಕಾರದ ಮೇಲೆ ಪರಿಣಾಮಕಾರಿ ರಾಜ–ಕೀಯ ಒತ್ತಡ ಹೇರಲು ಸಾಧ್ಯ ಎಂಬ ಸಂದೇಶ ಎರಡೂ ಪಕ್ಷಗಳ ನಾಯಕರಿಗೆ ದೊರೆತಿರುವುದು. ಎನ್‌ಡಿಎ ಮೈತ್ರಿಗೆ ಹೊಸ ಆತ್ಮವಿಶ್ವಾಸ

ರೂಪುಗೊಂಡ ಬಿಜೆಪಿ–ಜೆಡಿಎಸ್ ಮೈತ್ರಿ ಕರ್ನಾಟಕದ ರಾಜಕೀಯದಲ್ಲಿ ಹೊಸ ಸಮೀಕರಣಕ್ಕೆ ಕಾರಣವಾಗಿತ್ತು. ಆದರೆ ವಿಧಾನಮಂಡಲದ ಒಳಗೆ ಈ ಮೈತ್ರಿ ಎಷ್ಟರ ಮಟ್ಟಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡಲಿದೆ ಎಂಬ ಪ್ರಶ್ನೆಯೂ ಇತ್ತು. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲಿ ನಡೆದ ಹೋರಾಟ ಆ ಪ್ರಶ್ನೆಗೆ ಒಂದು ಮಟ್ಟಿಗೆ ಉತ್ತರ ನೀಡಿದೆ. ಎರಡೂ ಪಕ್ಷಗಳು ತಮ್ಮ ರಾಜಕೀಯ ಹಿತಾಸಕ್ತಿಗಳು ಹಾಗೂ ಹಿಂದಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಸರ್ಕಾರದ ವಿರುದ್ಧ ನಿರ್ದಿಷ್ಟ ವಿಷಯವನ್ನು ಮುಂದಿಟ್ಟುಕೊಂಡು ಒಗ್ಗಟ್ಟಾಗಿ ಹೋರಾಡಿದರೆ ಅದರ ರಾಜಕೀಯ ಪರಿಣಾಮ ದೊಡ್ಡದಾಗಬಹುದು ಎಂಬುದು ಈ ಬೆಳವಣಿಗೆಯಿಂದ ಸ್ಪಷ್ಟವಾಗಿದೆ. ಇದು ಬಿಜೆಪಿ ಮತ್ತು ಜೆಡಿಎಸ್‌ನ ಕೆಳಹಂತದ ಕಾರ್ಯಕರ್ತ–ರಿಗೂ ಹೊಸ ಉತ್ಸಾಹ ನೀಡುವ ಸಾಧ್ಯತೆಯಿದೆ.

ನಾಗೇಂದ್ರ ಪ್ರಕರಣದ ಬೆಳವಣಿಗೆ ಮುಂದಿನ ದಿನಗಳಲ್ಲಿ ಬಿಜೆಪಿ–ಜೆಡಿಎಸ್ ರಾಜಕೀಯ ಕಾರ್ಯತಂತ್ರದ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಈವರೆಗೆ ಪ್ರತ್ಯೇಕವಾಗಿ ಅಥ–'ವಾ ಕೆಲವೊಮ್ಮೆ ಪರಸ್ಪರ ಭಿನ್ನ ನಿಲುವುಗಳೊಂದಿಗೆ ಸರ್ಕಾರವನ್ನು ಎದುರಿಸುತ್ತಿದ್ದ ಎರಡು ಪಕ್ಷಗಳು, ಸರ್ಕಾರದ ವಿರುದ್ಧದ ಪ್ರಮುಖ ವಿಚಾರಗಳಲ್ಲಿ ಕನಿಷ್ಠ ಸಾಮಾನ್ಯ ರಾಜಕೀಯ ವೇದಿಕೆಯನ್ನು ರೂಪಿಸಿಕೊಳ್ಳುವ ಸಾಧ್ಯತೆ ಹೆಚ್ಚಾಗಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹಲವು ಆಡಳಿತಾತ್ಮಕ ಹಾಗೂ ರಾಜಕೀಯ ವಿಚಾರಗಳು ಮುನ್ನೆಲೆಗೆ ಬರಬಹುದು. ಇಂತಹ ಸಂದರ್ಭಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಒಂದೇ ಧ್ವನಿಯಲ್ಲಿ ಹೋರಾಟ ನಡೆಸಿದರೆ, ಸರ್ಕಾರದ ಮೇಲೆ ಒತ್ತಡ ಮತ್ತಷ್ಟು ಹೆಚ್ಚಿಸುವ ಅವಕಾಶವೂ ಇದೆ.

## ಬಿಟ್‌ಕಾಯಿನ್ ಹಗರಣ : ಶ್ರೀಕಿ, ರಾಬಿನ್ ಖಂಡೇವಾಲಾ ಜಾಮೀನು ಅರ್ಜಿ ತಿರಸ್ಕೃತ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯಾದ್ಯಂತ ಸಂಚಲನ ಮೂಡಿಸಿದ್ದ ಬಿಟ್‌ಕಾಯಿನ್ ಹಗರಣ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಪ್ರಮುಖ ಆರೋಪಿಗಳಿಗೆ ನ್ಯಾಯಾಲಯದಿಂದ ಹಿನ್ನಡೆಯಾಗಿದ್ದು, ಜಾಮೀನು ಅರ್ಜಿ ತಿರಸ್ಕೃತಗೊಂಡಿದೆ. ಕುಖ್ಯಾತ ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಹಾಗೂ ಕ್ರಿಪ್ಟೋಕರೆನ್ಸಿ ಟ್ರೇಡರ್ ರಾಬಿನ್ ಖಂಡೇವಾಲಾ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ವಿಚಾರಣೆ ನಡೆಸಿದ ಬೆಂಗಳೂರಿನ ವಿಶೇಷ ಪಿಎಂ–ಎಲ್‌ಎ ನ್ಯಾಯಾಲಯವು ವಜಾಗೊಳಿಸಿದೆ. ಇಬ್ಬರೂ ಸದ್ಯ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ.**

ಸರ್ಕಾರಿ ಹಾಗೂ ಖಾಸಗಿ ಜಾಲತಾಣಗಳು, ಕ್ರಿಪ್ಟೋ ಎಕ್ಸ್‌ಚೇಂಜ್‌ಗಳು ಮತ್ತು ಆನ್‌ಲೈನ್ ಗೇಮಿಂಗ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿ ಕೋಟ್ಯಂತರ ರೂ. ಮೌಲ್ಯದ ಬಿಟ್‌ಕಾಯಿನ್ ಹಾಗೂ ಇತರ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಿರುವ ಆರೋಪ ಶ್ರೀಕಿ ಮೇಲಿದೆ.



ಮತ್ತೋರ್ವ ಆರೋಪಿ ರಾಬಿನ್ ಖಂಡೇವಾಲಾ, ಶ್ರೀಕಿ ಹ್ಯಾಕ್ ಮಾಡಿದ್ದ ಬಿಟ್‌ಕಾಯಿನ್‌ಗಳು ಹಾಗೂ ಇತರ ಡಿಜಿಟಲ್ ಆಸ್ತಿಗಳನ್ನು ನಗದಾಗಿ ಪರಿವರ್ತಿಸಿ, ಪೂರ್ವಯೋಜಿತ ಸಂಚಿನಂತೆ ವಿವಿಧ ವ್ಯಕ್ತಿಗಳಿಗೆ ಹಣ ವರ್ಗಾವಣೆ ಮಾಡುತ್ತಿದ್ದನೆಂದು ಜಾರಿ ನಿರ್ದೇಶನಾಲಯದ (ಇಡಿ) ತನಿಖೆಯಲ್ಲಿ ತಿಳಿದುಬಂದಿದೆ.

ಕಳೆದ ಮೇ ತಿಂಗಳಲ್ಲಿ ಇಡಿ ಅಧಿಕಾರಿಗಳು ಶ್ರೀಕಿ ಮತ್ತು ರಾಬಿನ್ ಖಂಡೇವಾಲಾ ಅವರನ್ನು ಬಂಧಿಸಿದ್ದರು. ತನಿಖೆ ಚುರುಕುಗೊಳಿಸಿರುವ ಸಂಸ್ಥೆ ಈಗಾಗಲೇ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ (ಚಾರ್ಜ್‌ಶೀಟ್) ಸಲ್ಲಿಸಿದೆ. ಪ್ರಕರಣದ ತನಿಖೆಯ ಭಾಗವಾಗಿ ಕೆಲ ತಿಂಗಳ ಹಿಂದೆ ಯುವ ಕಾಂಗ್ರೆಸ್ ನಾಯಕ ಮೊಹಮದ್ ಹ್ಯಾರಿಸ್ ನಲಪಾಡ್ ಅವರ ನಿವಾಸ ಸೇರಿದಂತೆ ಹಲವು ಸ್ಥಳಗಳಲ್ಲೂ ಇಡಿ ಅಧಿಕಾರಿಗಳು ಶೋಧ ನಡೆಸಿದ್ದರು. ಜಾಮೀನು ಅರ್ಜಿ ವಿಚಾರಣೆ ವೇಳೆ ಇಡಿ ಪರ ವಿಶೇಷ ಅಭಿಯೋಜಕ ಮಧು ಎನ್. ರಾವ್ ವಾದ ಮಂಡಿಸಿ, ಆರೋಪಿಗಳು ಎಸಗಿದ್ದಾರೆ ಎನ್ನಲಾದ ಆರ್ಥಿಕ ಅಪರಾಧದ ಗಂಭೀರತೆ ಹಾಗೂ ತನಿಖೆಯಲ್ಲಿ ಲಭ್ಯವಾಗಿರುವ ಸಾಕ್ಷ್ಯಾಧಾರಗಳನ್ನು ನ್ಯಾಯಾಲಯದ ಮುಂದಿಟ್ಟರು. ಆರೋಪಿಗಳಿಗೆ ಜಾಮೀನು ನೀಡಿದರೆ ತನಿಖೆ ಹಾಗೂ ಸಾಕ್ಷ್ಯಾಧಾರಗಳಿಗೆ ಧಕ್ಕೆಯಾಗುವ ಸಾಧ್ಯತೆಯಿದೆ ಎಂದು ವಾದಿಸಿದರು.ಉಭಯ ಪಕ್ಷಗಳ ವಾದ–ಪ್ರತಿವಾದ ಆಲಿಸಿದ ವಿಶೇಷ ನ್ಯಾಯಾಲಯವು ಆರೋಪಗಳ ಗಂಭೀರತೆಯನ್ನು ಪರಿಗಣಿಸಿ ಇಬ್ಬರಿಗೂ ಜಾಮೀನು ನಿರಾಕರಿಸಿ ಆದೇಶಿಸಿದೆ.

ಏಪ್ರಿಲ್‌ನಲ್ಲಿ ಇಡಿ ದಾಳಿ

ಬಿಟ್‌ಕಾಯಿನ್ ಪ್ರಕರಣದ ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿದ್ದ ಇಡಿ, 2026ರ ಏಪ್ರಿಲ್‌ನಲ್ಲಿ ಬೆಂಗಳೂರಿನ ವಿವಿಧ ಸ್ಥಳಗಳಲ್ಲಿ ದಾಳಿ ನಡೆಸಿತ್ತು. ಶ್ರೀಕಿ ಹಾಗೂ ಅವರೊಂದಿಗೆ ಸಂಪರ್ಕ ಹೊಂದಿದ್ದಾರೆಂದು ತನಿಖೆಯಲ್ಲಿ ಹೇಳಲಾದ ವ್ಯಕ್ತಿಗಳಿಗೆ ಸೇರಿದ ಸ್ಥಳಗಳಲ್ಲೂ ಶೋಧ ನಡೆಸಲಾಗಿತ್ತು.ಕಾಂಗ್ರೆಸ್ ನಾಯಕ ಮೊಹಮದ್ ಹ್ಯಾರಿಸ್ ನಲಪಾಡ್ ಹಾಗೂ ಅವರ ಸಹೋದರ ಓಮರ್ ಫಾರೂಕ್ ನಲಪಾಡ್‌ಗೆ ಸಂಬಂಧಿಸಿದ ಸ್ಥಳಗಳ ಮೇಲಿನ ಶೋಧವೂ ಈ ಹಂತದಲ್ಲಿ ರಾಜಕೀಯವಾಗಿ ಗಮನ ಸೆಳೆದಿತ್ತು. ದಾಳಿಗಳ ಬಳಿಕ ಮೇ 8, 2026ರಂದು ಶ್ರೀಕೃಷ್ಣ, ರಾಬಿನ್ ಖಂಡೇವಾಲಾ ಹಾಗೂ ಸುನೀಶ್ ಹೆಗ್ಡೆ ಅವರನ್ನು ಇಡಿ ಬಂಧಿಸಿತ್ತು. ಆರೋಪಿಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಆರಂಭಿಕ ಹಂತದಲ್ಲಿ ಇಡಿ ಕಸ್ಟಡಿಗೆ ಒಪ್ಪಿಸಲಾಗಿತ್ತು.

ಏನಿದು ಬಿಟ್‌ಕಾಯಿನ್ ಹಗರಣ?

ವಿರುದ್ಧ ಸರ್ಕಾರಿ ಹಾಗೂ ಖಾಸಗಿ ಜಾಲತಾಣಗಳು, ಕ್ರಿಪ್ಟೋ ಎಕ್ಸ್‌ಚೇಂಜ್‌ಗಳು ಮತ್ತು ಆನ್‌ಲೈನ್ ಗೇಮಿಂಗ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿ ಡಿಜಿಟಲ್ ಆಸ್ತಿಗಳನ್ನು ಕಳವು ಮಾಡಿರುವ ಆರೋಪಗಳಿವೆ. ತನಿಖಾ ಸಂಸ್ಥೆಗಳ ಪ್ರಕಾರ, ಕಳವು ಮಾಡಲಾದ ಬಿಟ್‌ಕಾಯಿನ್ ಹಾಗೂ ಇತರ ಕ್ರಿಪ್ಟೋ ಆಸ್ತಿಗಳನ್ನು ನೇರವಾಗಿ ಬಳಸದೆ ವಿವಿಧ ಕ್ರಿಪ್ಟೋ ಟ್ರೇಡಿಂಗ್ ಚಾನೆಲ್‌ಗಳು ಮತ್ತು ಬ್ಯಾಂಕ್ ಖಾತೆಗಳ ಮೂಲಕ ಪರಿವರ್ತಿಸಿ, ಹಣದ ಮೂಲವನ್ನು ಮರೆಮಾಚಲು ಪ್ರಯತ್ನಿಸಲಾಗಿದೆ ಎಂಬ ಆರೋಪವಿದೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101